ಸಂಪುಟ : 9 ಸಂಚಿಕೆ 152 ಪುಟ : 4 ಬೆಲೆ: 3.00 ರವಿವಾರ ಜುಲೈ 21 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 152 Pages : 4 Price : 3.00 Sunday July 21 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಹಳ್ಳಕೇರಿ ನಿವಾಸಿಗಳಿಂದ ರಸ್ತೆ ತಡೆ । ತಹಸೀಲ್ದಾರರನ್ನು ತಡೆದು ಆಕ್ರೋಶ ಹೊರಹಾಕಿದ ಸ್ಥಳೀಯರು

# ಮಳೆಗಾಲದಲ್ಲೂ ಕುಡಿಯುವ ನೀರಿಗೆ ತತ್ವಾರ!

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಹಳ್ಳದಕೇರಿ ಓಣಿಯ ನಿವಾಸಿಗಳು ರಸ್ತೆ ದುರಸ್ಥಿ ಮತ್ತು ಸಮರ್ಪಕ ಕುಡಿಯುವ ನೀರಿಗಾಗಿ ಆಗ್ರಹಿಸಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಈ ವೇಳೆ ಆಕಸ್ಮಿಕವಾಗಿ ಈ ಮಾರ್ಗವಾಗಿ ಆಗಮಿಸಿದ ತಹಸೀಲ್ದಾರ ವಾಸುದೇವ ಸ್ವಾಮಿ ಅವರನ್ನು ತಡೆದು ನಿಲ್ಲಿಸಿದ ಮಹಿಳೆಯರಾದ ಗಿರಿಜಮ್ಮ ಕರೆತ್ತಿನ, ನೀಲವ್ವ ಕೊಂಗಿ, ಶೈಲವ್ವ ಹಳ್ಳಿಕೇರಿ, ಪಾರ್ವತೆವ್ವ ಬೇವಿನಮರದ ಮತ್ತಿತರರು ತಾವು ಅನುಭವಿಸುತ್ತಿರುವ ಸಮಸ್ಯೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ನಮ್ಮದು ರೈತಾಪಿ ವರ್ಗದ ಜನರೇ ಹೆಚ್ಚಿರುವ ಪ್ರದೇಶವಾಗಿದ್ದು, ರಸ್ತೆ ಡಾಂಬರೀಕರಣಕ್ಕಾಗಿ ತಿಂಗಳ ಹಿಂದೆಯೇ ರಸ್ತೆ ಅಗೆದು ಕೈಬಿಟ್ಟಿದ್ದಾರೆ. ದೂದಪೀರಾಂ ದರ್ಗಾ ಹತ್ತಿರದ ರಸ್ತೆ ನಿರ್ಮಾಣಕ್ಕೆ 2 ವರ್ಷದ ಹಿಂದೆಯೇ ಭೂಮಿಪೂಜೆ



ಮಾಡಿದ್ದರೂ ರಸ್ತೆ ಕಾಮಗಾರಿ ಮಾತ್ರ ಪ್ರಾರಂಭವಾಗಿಲ್ಲ ಎಂದು ಆಕ್ರೋಶ ಹೊರಹಾಕಿದರು.

ಈ ವೇಳೆ ಮಾತನಾಡಿದ ತಹಸೀಲ್ದಾರ ವಾಸುದೇವ ಸ್ವಾಮಿ, ಪಟ್ಟಣದಲ್ಲಿ ನಗರೋತ್ಥಾನ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳು ಗುತ್ತಿಗೆದಾರರ ನಿರ್ಲಕ್ಷದಿಂದ ಅರ್ಧಕ್ಕೆ ನಿಂತಿರುವ ಬಗ್ಗೆ ಜಿಲ್ಲಾಧಿಕಾರಿಗಳ ಗಮನಕ್ಕೂ ಬಂದಿದೆ. ಮುಖ್ಯಾಧಿಕಾರಿಗಳೊಂದಿಗೆ ಚರ್ಚಿಸಿ 2 ದಿನಗಳಲ್ಲಿ ತಾತ್ಕಾಲಿಕವಾಗಿ ರಸ್ತೆ ದುರಸ್ಥಿಗೊಳಿಸಲಾಗುವುದು. ಕುಡಿಯುವ ನೀರಿನ ಪೈಪ್‌ಲೈನ್ ಹಳೆಯದಾಗಿದ್ದು, ಹೊಸ ಪೈಪ್‌ಲೈನ್ ಅಳವಡಿಕೆಗೆ ಸರ್ಕಾರಕ್ಕೆ ಕ್ರಿಯಾಯೋಜನೆ ಕಳುಹಿಸಲಾಗಿದೆ ಎಂದರು.


ಇದಕ್ಕೆ ಪ್ರತಿಕ್ರಿಯಿಸಿದ ಮಹಿಳೆಯರು, 2 ದಿನಗಳಲ್ಲಿ ದುರಸ್ಥಿ ಕಾರ್ಯ ನಡೆಯದಿದ್ದರೆ ತಹಸೀಲ್ದಾರ ಕಚೇರಿಯ ಮುಂದೆ ಪ್ರತಿಭಟನೆ ಮಾಡಲಾಗುವುದೆಂದು ಎಚ್ಚರಿಸಿದರು. ಈ ವೇಳೆ ನಿವಾಸಿಗಳಾದ ಮಂಜುನಾಥ ಮಾಗಡಿ, ಸುಭಾನಸಾಬ ಹೊಂಬಳ, ಅಭಯ ಜೈನ್, ಚಂದ್ರು ಮಾಗಡಿ, ಮಲ್ಲಿಕಾರ್ಜುನ ಅಣ್ಣಿಗೇರಿ, ಮುತ್ತು ನೀರಲಗಿ, ಮಲ್ಲು ಅಂಕಲಿ, ಫಕ್ಕಿರೇಶ ಭಜಂತ್ರಿ, ನೀಲವ್ವ ಹಳ್ಳಿಕೇರಿ, ಶ್ವೇತಾ ರೋಣದ, ಶೇಖವ್ವ ನೂಲ್ವಿ, ನೀಲವ್ವ ಹುಲಕೋಟಿ, ಲಕ್ಷ್ಮವ್ವ ಬೇವಿನಮನರದ ಸೇರಿ ಅನೇಕರಿದ್ದರು.

> ಮಳೆಗಾಲ ಪ್ರಾರಂಭವಾದಾಗಿನಿಂದ ಕೆಸರು ತುಂಬಿರುವ ರಸ್ತೆಯಲ್ಲಿ ಹಾದು ಹೋಗಲಾಗುತ್ತಿಲ್ಲ. ಮಕ್ಕಳು, ವಯಸ್ಸಾದವರನ್ನು ಕೈ ಹಿಡಿದು ಹೊತ್ತುಕೊಂಡು ಸಾಗಿಸಬೇಕಾಗಿದೆ. ಬೈಕ್, ಅಟೋ ಸೇರಿ ವಾಹನ, ಎತ್ತು ಚಕ್ಕಡಿ ಸಂಚಾರ ಬಂದ್ ಆಗಿವೆ. ಮಳೆಗಾಲದಲ್ಲೂ 15–20 ದಿನಗಳಿಗೊಮ್ಮೆ ಕುಡಿಯುವ ನೀರು. ನಿತ್ಯದ ಬದುಕು ಕಷ್ಟಕರವಾಗಿದೆ. ಈ ಬಗ್ಗೆ ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳು ನಮ್ಮ ಗೋಳು ಕೇಳದೇ ಕಂಡೂ ಕಾಣದಂತೆ ಜಾಣ ಮೌನ ತಾಳಿದ್ದಾರೆ. ಕೂಡಲೇ ರಸ್ತೆ ದುರಸ್ಥಿ ಮಾಡಿಸಿ ಪುಣ್ಯ ಕಟ್ಟಿಕೊಳ್ಳಿ ಎಂದು ಪ್ರತಿಭಟನಾಕಾರರು ಅಲವತ್ತುಕೊಂಡರು.




## ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲರ ಜಿಲ್ಲಾ ಪ್ರವಾಸ

■ **ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಜುಲೈ 21 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಇಂತಿದೆ.

ಜುಲೈ 21 ರಂದು ಬೆಳಿಗ್ಗೆ 10 ಗಂಟೆಗೆ ಗದಗ ಜಿಲ್ಲಾ ವಕೀಲರ ಸಂಘದ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ವಕೀಲರ ಪರಿಷತ್, ಬೆಂಗಳೂರು ಹಾಗೂ ಗದಗ ಜಿಲ್ಲಾ ವಕೀಲರ ಸಂಘದ ವತಿಯಿಂದ ಏರ್ಪಡಿಸಲಾದ ಕಾನೂನು ಕಾರ್ಯಾಗಾರದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1 ಗಂಟೆಗೆ ನಗರದ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪದಲ್ಲಿ ಗದಗ ಜಿಲ್ಲಾ ಹಡಪದ ಅಪ್ಪಣ್ಣ ಸೇವಾ ಸಂಘ ಗದಗ ( ರಿ) ಇವರ ವತಿಯಿಂದ ಹಡಪದ ಅಪ್ಪಣ್ಣ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ರಾತ್ರಿ 8.30 ಗಂಟೆಗೆ ರಸ್ತೆ ಮೂಲಕ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### ನರೇಗಾ ಸಹಾಯದಿಂದ ಲಕ್ಷ ಲೆಕ್ಕದ ಫಸಲು ಬೆಳೆದ ರೈತ

# ಕೈ ಹಿಡಿದ ಡ್ರ್ಯಾಗನ್ ಫ್ರೂಟ್

■ **ವಿಜಯಸಾಕ್ಷಿ ಸುದ್ದಿ, ಗದಗ**

ಮುಂಡರಗಿ ತಾಲೂಕಿನ ಹಾರೋಗೇರಿ ಗ್ರಾಮದ ರೈತ ಮೈಲಾರೆಪ್ಪ ಚೋಳಮ್ಮನವರ ತಮ್ಮ ಒಂದು ಎಕರೆ ಜಮೀನಿನಲ್ಲಿ 2021–22ನೇ ಸಾಲಿನಲ್ಲಿ ಡ್ರ್ಯಾಗನ್ ಫ್ರೂಟ್ ಸಸಿ ನಾಟಿ ಮಾಡಿದ್ದರು. ಆಗ ಡ್ರ್ಯಾಗನ್ ಫ್ರೂಟ್ ಬೆಳೆಯಲು ಮುಂದಾದಾಗ ಕೈ ಹಿಡಿದಿದ್ದು ನರೇಗಾ ಯೋಜನೆ.

ನರೇಗಾ ಯೋಜನೆಯಡಿ ತೋಟಗಾರಿಕೆ ಇಲಾಖೆ ಮೂಲಕ ದೊರೆತ ಸಹಾಯಧನದಿಂದ ಒಂದು ಎಕರೆಯಲ್ಲಿ 35 ರೂಪಾಯಿಗೆ ಒಂದರಂತೆ 1700 ಸಸಿಗಳನ್ನು ತಂದು ನೆಟ್ಟಿದ್ದರು.

ನೆಟ್ಟ ವರ್ಷ ಹೊರತುಪಡಿಸಿದರೆ ನಂತರದ ಮೂರು ವರ್ಷಗಳಲ್ಲಿ ಕ್ರಮವಾಗಿ 1.50 ಲಕ್ಷ, 2.50 ಲಕ್ಷ ಕೈ ಸೇರಿದೆ.



ಈ ವರ್ಷ ಈಗಾಗಲೇ 2.50 ಲಕ್ಷ ರೂ ಆದಾಯ ಕೈ ಸೇರಿದ್ದು, ಇನ್ನು ಎರಡು ಲಕ್ಷ ರೂಪಾಯಿಗಳ ಆದಾಯದ ನಿರೀಕ್ಷೆಯಲ್ಲಿ ರೈತ ಮೈಲಾರೆಪ್ಪ ಇದ್ದಾರೆ.

ಮೈಲಾರೆಪ್ಪನವರ ಮಕ್ಕಳಾದ ಮರುಳಸಿದ್ದಪ್ಪ, ಭರತ, ನಿಂಗರಾಜ ಅವರು ಸಹ ಜಮೀನಿನ ಉಸ್ತುವಾರಿಯಲ್ಲಿದ್ದು, ಪ್ರತಿ ವರ್ಷದ ಮಳೆಗಾಲದ ಸಮಯದಲ್ಲಿ ಲಕ್ಷಗಳ ಲೆಕ್ಕದಲ್ಲಿ ಡ್ರ್ಯಾಗನ್ ಫ್ರೂಟ್ ಫಸಲು ಕಟಾವಿಗೆ ಬರುತ್ತಿರುವುದು ಅವರ ಹುಮ್ಮಸ್ಸನ್ನು ಇಮ್ಮಡಿಗೊಳಿಸಿದೆ.

ಡ್ರ್ಯಾಗನ್ ಫ್ರೂಟ್ ಸಸಿಗಳನ್ನು ತಂದು ರೈತ ಮೈಲಾರೆಪ್ಪನವರು ನೆಡುವಾಗ ಈ ಭಾಗಕ್ಕೆ ಅದು ಹೊಸ ಹಣ್ಣು.

ಈಗ ಡ್ರ್ಯಾಗನ್ ಫ್ರೂಟ್ ಕಟಾವಿನ ಸಮಯದಲ್ಲಿ ಕೊಂಡುಕೊಳ್ಳಲು ಹಣ್ಣಿನ ವ್ಯಾಪಾರಸ್ಥರು ಮಹಾನಗರಗಳಿಂದ ಹಾರೋಗೇರಿ ಗ್ರಾಮದ ತೋಟಕ್ಕೆ ಬರುತ್ತಿದ್ದಾರೆ.

ಇದರಿಂದ ಸಾಗಣೆ ವೆಚ್ಚವೂ ಕಡಿಮೆಯಾಗಿದ್ದು, ಮನೆಯವರೇ ಕಟಾವಿನ ಕಾರ್ಯದಲ್ಲಿ ತೊಡಗಿಕೊಳ್ಳುತ್ತಾರೆ.



> ನರೇಗಾ ಯೋಜನೆಯಲ್ಲಿ ಡ್ರ್ಯಾಗನ್ ಫ್ರೂಟ್ ಬೆಳೆಯಬಹುದಾದ ಮಾಹಿತಿ ಸಿಕ್ಕಿತು. ಈ ಬಗ್ಗೆ ವಿಚಾರಿಸಿದಾಗ ತಾಲೂಕು ಪಂಚಾಯಿತಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಅಗತ್ಯ ಮಾರ್ಗದರ್ಶನ ನೀಡಿದರು. ಇದರಿಂದ ಅನುಕೂಲವಾಗಿದೆ. ಲಕ್ಷದ ಲೆಕ್ಕದಲ್ಲಿ ಆದಾಯ ಕೈಸೇರುತ್ತಿದೆ.
>
> **– ಮೈಲಾರೆಪ್ಪ ಚೋಳಮ್ಮನವರ. ರೈತ.**

> ನರೇಗಾ ಯೋಜನೆಯ ಮೂಲಕ ಡ್ರ್ಯಾಗನ್ ಫ್ರೂಟ್ ಬೆಳೆದು ರೈತ ಮೈಲಾರೆಪ್ಪ ಪ್ರತಿವರ್ಷ ಲಕ್ಷ ಲಕ್ಷ ಆದಾಯ ಗಳಿಸುತ್ತಿರುವುದು ರೈತ ಸ್ವಾವಲಂಬನೆಗೆ ಮಾದರಿಯಾಗಿದೆ. ಇದು ನರೇಗಾ ಯೋಜನೆಯ ಸಮರ್ಪಕ ಸದ್ಬಳಕೆಗೆ ಒಂದು ಉತ್ತಮ ಉದಾಹರಣೆ.
>
> **– ವಿಶ್ವನಾಥ ಹೊಸಮನಿ. ಇಓ, ತಾಪಂ–ಮುಂಡರಗಿ.**

## ರಸ್ತೆ ಅಪಘಾತ: ತಪ್ಪಿತ ಅನಾಹುತ

■ **ವಿಜಯಸಾಕ್ಷಿ ಸುದ್ದಿ, ರೋಣ**

ಪಟ್ಟಣದ ಮುಲ್ಲಾನಭಾವಿ ಕ್ರಾಸ್‌ನಲ್ಲಿ ಬೈಕ್ ಹಾಗೂ ಬಸ್ ನಡುವೆ ಅಪಘಾತ ಸಂಭವಿಸಿ ಪವಾಡಸದೃಶವಾಗಿ ಹಿಂಬದಿ ಸವಾರ ಜೀವ ಉಳಿಸಿಕೊಂಡ ಘಟನೆ ಶನಿವಾರ ಮದ್ಯಾಹ್ನ ನಡೆದಿದೆ.

ರೋಣದಿಂದ ಸದಲಗಾ ಕಡೆಗೆ ಹೊರಟ್ಟಿದ್ದ ಬಸ್ ಮುಲ್ಲಾಭಾವಿ ಕ್ರಾಸ್ ಬಳಿ ಬರುತ್ತಿದ್ದಂತೆ ಈ ಘಟನೆ ನಡೆದಿದ್ದು, ಸಿನಿಮೀಯ ರಿತಿಯಲ್ಲಿ ಬೈಕ್ ಸವಾರರು ತಮ್ಮ ಜೀವ ಉಳಿಸಿಕೊಂಡಿದ್ದಾರೆ. ಮುಲ್ಲಾನ ಭಾವಿ ಕ್ರಾಸ್‌ನಲ್ಲಿ ಇಕ್ಕಟ್ಟಿನ ರಸ್ತೆಯಿದ್ದು, ಇಲ್ಲಿ ನಿತ್ಯ ಟ್ರಾಫಿಕ್ ಜಾಮ್ ಸಾಮಾನ್ಯವಾಗಿದೆ. ಈ ವಿಷಯ ಪೊಲೀಸರಿಗೆ ಅರಿವಿದ್ದರೂ ನಿಷ್ಕಾಳಜಿ ವಹಿಸುತ್ತಿರುವುದು ಇಂತಹ ಘಟನೆಗಳಿಗೆ ಕಾರಣವಾಗಿದೆ.

ಸಾರಿಗೆ ಸಂಸ್ಥೆಯ ಬಸ್ ಕ್ರಾಸ್ ಬಳಿ ಬರುತ್ತಿದ್ದಂತೆ ಬೈಕ್ ಸವಾರರು ಕೂಡ ಎದುರಿಗೆ ಬಂದಿದ್ದಾರೆ. ಈ ಸಮಯದಲ್ಲಿ ಬೈಕ್ ಬಸ್‌ನ ಎರಡು ಚಕ್ರದ ನಡುವೆ ಸಿಲುಕಿಕೊಂಡಿದೆ. ಇದನ್ನು ಗಮನಿಸಿದ ಬಸ್ ಚಾಲಕ ತಕ್ಷಣ ಬಸ್ ನಿಲ್ಲಿಸಿದ ಪರಿಣಾಮ ಯುವಕರಿಬ್ಬರ ಜೀವ ಉಳಿದಂತಾಗಿದೆ. ಪೊಲೀಸ್ ಇಲಾಖೆ ನಿರ್ಲಕ್ಷ್ಯ ತಾಳದೆ ಈ ವೃತ್ತದಲ್ಲಿ ಸಿಬ್ಬಂದಿಯನ್ನು ನಿಯೋಜಿಸಿ ಟ್ರಾಫಿಕ್ ಸಮಸ್ಯೆ ನಿಯಂತ್ರಿಸಿ, ಸಂಚಾರ ನಿಯಮಗಳನ್ನು ಬಿಗಿಗೊಳಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.




## ಹೆಸರು ಬೆಳೆಗೆ ಹಳದಿ ನಂಜು ರೋಗ



■ **ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ತಿಮ್ಮಾಪೂರ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಹಲವಾರು ಗ್ರಾಮದಲ್ಲಿ ಪ್ರಸ್ತುತ ಮುಂಗಾರು ಹಂಗಾಮಿನಲ್ಲಿ ರೈತರು ಸಾವಿರಾರು ಹೆಕ್ಟೇರ್ ಪ್ರದೇಶದಲ್ಲಿ ಹೆಸರು ಬಿತ್ತನೆ ಮಾಡಿದ್ದು, ಹೆಸರು ಬೆಳೆಗಳು ಕಾಯಿ ಕಟ್ಟುವ ಹಂತದಲ್ಲಿ ಹಳದಿ ರೋಗ ಕಾಣಿಸಿಕೊಂಡಿದೆ.

ಬೆಳೆ ಕಳೆದುಕೊಂಡ ರೈತರಿಗೆ ಸರ್ಕಾರ ಸೂಕ್ತ ಪರಿಹಾರ ಕೊಡಬೇಕೆಂದು ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಅಂದಪ್ಪ ಕೂಳೂರು ಆಗ್ರಹಿಸಿದರು. ಈ ಹಿನ್ನೆಲೆಯಲ್ಲಿ ಗದಗ ಜಿಲ್ಲೆ ಬೆಟಗೇರಿ ಹೋಬಳಿಗೆ ಬರುವ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ವೀರಣ್ಣ ಗಡಾದ ಖುದ್ದಾಗಿ ರೈತರ ಜಮೀನಿಗೆ ಭೇಟಿ ನೀಡಿ ಪರಿಶೀಲಿಸಿದರು.

ಹೆಸರು ಬೆಳೆ ಹಳದಿ ರೋಗ ಹೆಚ್ಚಾಗಿದೆ. ಹಳದಿ ಬಣ್ಣದ ರೋಗಕ್ಕೆ ತುತ್ತಾಗಿದ್ದು, ಇದರ ಹತೋಟಿಗೆ ಪೈಯಾಮಿಥಾಕಾಸ್ಸಮ್ ನೈಟ್ರೇಟ್ ರಸಗೊಬ್ಬರ ಕೀಟನಾಶಕ ಬಳಕೆ ಮಾಡುಬೇಕು ಎಂದು ಸೂಚಿಸಿದರು. ಹೆಸರು ಬೆಳೆಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಹಳದಿ ನಂಜು ರೋಗ ಇರುವ ಬೆಳೆಯನ್ನು ಕಿತ್ತು ನಾಶ ಮಾಡಬೇಕು. ರೂಟರ್ ಹೊಡೆದು ಭೂಮಿಯಲ್ಲಿ ಹಾಕಿದರೆ ಗೊಬ್ಬರವಾಗುತ್ತದೆ. ನಂತರವಷ್ಟೇ ಬೇರೆ ಬೆಳೆಗಳನ್ನು ಬಿತ್ತನೆ ಮಾಡಿ ಎಂದರು.

ಈ ಸಂದರ್ಭದಲ್ಲಿ ರೈತರಾದ ಹೋನಕೇರೆಪ್ಪ ಬಿಚಗಲ್, ಶರಣಪ್ಪ ಜೋಗಿನ, ಭರಮಪ್ಪ ಸೋರಟೂರು, ದ್ಯಾಮಣ್ಣ ಹುಲಿ, ರಾಮಣ್ಣ ಗಾಣದ ಉದಯ ಗಂಗರಾತ್ರಿ, ರಾಮಣ್ಣ ಖಂಡ್ರೆ ಅಂದಪ್ಪ ಬಿಸನಳ್ಳಿ ಮುಂತಾದವರು ಪಾಲ್ಗೊಂಡಿದ್ದರು.

## ಬಸವಣ್ಣನವರ ಕುರಿತು ಉಪನ್ಯಾಸ ಇಂದು

■ **ವಿಜಯಸಾಕ್ಷಿ ಸುದ್ದಿ, ಗದಗ**



ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಜುಲೈ 21ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1603ನೇ ಶರಣ ಸಂಗಮದಲ್ಲಿ ಗುರು ಪೂರ್ಣಿಮೆ ಅಂಗವಾಗಿ 'ವಿಶ್ವಗುರು ಬಸವಣ್ಣನವರು' ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಸರಕಾರಿ ಪ್ರಥಮದರ್ಜೆ ಕಾಲೇಜಿನ ಪ್ರಾಚಾರ್ಯ ಎನ್.ಎಂ. ಪವಾಡಿಗೌಡ್ರ ನರೇಗಲ್ಲ ಉಪನ್ಯಾಸ ಮಾಡುವರು. ಅತಿಥಿಗಳಾಗಿ ಶರಣ ಶಂಕರಗೌಡ ಅಯ್ಯನಗೌಡ ಪಾಟೀಲ ಆಗಮಿಸುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಮಕ್ಕಳ ಪಠ್ಯ ಪುಸ್ತಕಕ್ಕೆ ಕಪ್ಪತ್ತಗುಡ್ಡದ ವಿಶೇಷತೆ ಸೇರ್ಪಡೆಯಾಗಲಿ

■ **ವಿಜಯಸಾಕ್ಷಿ ಸುದ್ದಿ, ಗದಗ**



ಪಂಚಲೋಹಗಳ ಬೀಡು, ಅಪಾರ ಆಯುರ್ವೇದದ ಔಷಧಿಗಳ ಖನಿಜ, ಸಸ್ಯಕಾಶಿ ಹಾಗೂ ವಿಶಿಷ್ಟ ರೀತಿಯ ವನ್ಯ ಜೀವಿಗಳನ್ನು ಹೊಂದಿರುವ, ಶುದ್ಧ ಗಾಳಿ ಬೀಸುವ ಉತ್ತರ ಕರ್ನಾಟಕದ ಸಹ್ಯಾದ್ರಿ ಕಪ್ಪತ್ತಗುಡ್ಡದ ಮಹತ್ವ ತಿಳಿಸಲು ಸರಕಾರ ಮಕ್ಕಳ ಶಾಲಾ ಪಠ್ಯಕ್ರಮದಲ್ಲಿ ಕಪ್ಪತ್ತಗುಡ್ಡದ ವಿಶೇಷತೆಯನ್ನು ಸೇರಿಸಬೇಕೆಂದು ಮುಂಡರಗಿ ತಾಲೂಕಿನ ಜಂತಲಿ ಶಿರೂರು ಗ್ರಾಮದ ಜನಪದ ಕಲಾವಿದ ಗವಿಶಿದ್ಧಯ್ಯ ಹಳ್ಳಿಕೇರಿಮಠ ಆಗ್ರಹಿಸಿದ್ದಾರೆ.

ಸ್ಕಂದ ಪುರಾಣದಲ್ಲಿ ಎಪ್ಪತ್ತಗಿರಿಗಿಂತ ಕಪ್ಪತ್ತಗಿರಿ ಮೇಲು ಎಂದು ಸಾರಲಾಗಿದೆ. ಸ್ವಚ್ಛಂದ ಗಾಳಿ ಬೀಸುವ ಹಾಗೂ ಆಯುರ್ವೇದದ ಗಿಡಮೂಲಿಕೆಗಳನ್ನು ಹೊಂದಿರುವ ಕಪ್ಪತ್ತಗುಡ್ಡ ಅತೀ ವೇಗವಾಗಿ ಗಾಳಿ ಬೀಸುವ ಪ್ರದೇಶವೂ ಹೌದು. ಅಲ್ಲಿರುವ ವನ್ಯ ಜೀವಿಗಳು ಅಸಂಖ್ಯ. 1882ರಲ್ಲಿ ಬ್ರಿಟಿಷ್ ಸರಕಾರ ಕಪ್ಪತ್ತಗುಡ್ಡವನ್ನು ಸಂರಕ್ಷಿತ ಅರಣ್ಯ ಪ್ರದೇಶವೆಂದು ಘೋಷಿಸಿತ್ತು. ಅಲ್ಲದೇ ಇತ್ತೀಚಿಗೆ ಈ ಭಾಗದ ಅನೇಕ ಪರಿಸರ ಹೋರಾಟಗಾರರ ಫಲವಾಗಿ ಇಂದು ವನ್ಯಜೀವಿಧಾಮವಾಗಿದೆ.

ಕಪ್ಪತ್ತಗುಡ್ಡವನ್ನು ನೋಡಲು ರಾಜ್ಯ, ಹೊರ ರಾಜ್ಯ, ದೇಶಗಳಿಂದಲೂ ಕಿಕ್ಕಿರಿದ ಜನಸ್ತೋಮ ಬರುತ್ತಿದೆ. ಕಪ್ಪತ್ತಗುಡ್ಡದ ಪರಿಸರ ಸಂರಕ್ಷಣೆಯಾಗಬೇಕಿದೆ. ಈ ಭಾಗದ ಜನರ ಜೀವನಾಡಿ ಕಪ್ಪತ್ತಗುಡ್ಡದ ಮಹತ್ವ ತಿಳಿಸಲು ಮಕ್ಕಳ ಶಾಲಾ ಪಠ್ಯಕ್ರಮದಲ್ಲಿ ಕಪ್ಪತ್ತಗುಡ್ಡದ ವಿಶೇಷತೆ ಸೇರ್ಪಡೆ ಮಾಡಬೇಕೆಂದು ಸರಕಾರಕ್ಕೆ ಹಳ್ಳಿಕೇರಿಮಠ ಒತ್ತಾಯಿಸಿದ್ದಾರೆ.

## ಸಂಪಾದಕೀಯ

# ಸರಕಾರಿ ನೌಕರರಿಗೆ ಬೇವು ಬೆಲ್ಲ

ಸರ್ಕಾರಿ ನೌಕರರಿಗೆ ಇವತ್ತು ಬೇವು ಬೆಲ್ಲದ ಸಂಭ್ರಮ. ಒಂದೆಡೆ ಏಳನೇ ವೇತನ ಆಯೋಗದ ಶಿಫಾರಸುಗಳನ್ನ ಜಾರಿ ಮಾಡಲು ಸರ್ಕಾರ ಮುಂದಾಗಿದೆ. ಇನ್ನೊಂದಡೆ ಸರ್ಕಾರಿ ನೌಕರರು ಭ್ರಷ್ಟಾಚಾರದಲ್ಲಿ ತೊಡಗಿದ್ದು ಅವರನ್ನ ನಿಯಂತ್ರಿಸುವ ಕಾಲ ಬಂದಿದೆ ಎಂದು, ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿಕೆ ನೀಡಿರುವುದು ಕಹಿ ಅನುಭವ ತಂದಿದೆ.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕಾರ್ಯಾಂಗಕ್ಕೆ ತನ್ನದೇ ಆದ ಮಹತ್ವವಿದೆ. ಕಾರ್ಯಾಂಗದ ಪ್ರಮುಖ ಭಾಗ ಎನಿಸಿರುವ ಸರ್ಕಾರಿ ನೌಕರರು ಇವತ್ತು ವೇತನ ಆಯೋಗದ ಶಿಫಾರಸಿನಂತೆ ವೇತನ ಪರಿಷ್ಕರಣೆಗೆ ಒಳಗಾಗಿದ್ದಾರೆ. ಆರೋಗ್ಯ ಭಾಗ್ಯ ಯೋಜನೆಯು ಶೀಘ್ರವೇ ಜಾರಿಗೆ ಬರುವ ಸಾಧ್ಯತೆಯಿದೆ. ಅದೇ ರೀತಿ ಹಳೆ ಪಿಂಚಣಿ ವ್ಯವಸ್ಥೆಗೂ ಬದಲಾವಣೆ ಆಗುವಂತಹ ಭರವಸೆ ಮೂಡಿದೆ.

ಸರ್ಕಾರಿ ನೌಕರರ ಸಂಘಟನೆ ಕೇವಲ ವೇತನ ಪರಿಷ್ಕರಣೆ ಹೋರಾಟಕ್ಕೆ ಸೀಮಿತವಾಗಬಾರದು. ಸರ್ಕಾರಿ ನೌಕರರು ಸರ್ಕಾರಕ್ಕೆ ಹೆಸರು ತರುವ ನಿಟ್ಟಿನಲ್ಲಿ ಮತ್ತು ಜನಸಾಮಾನ್ಯರಿಗೆ ಸರ್ಕಾರದ ಸೌಲಭ್ಯಗಳನ್ನ ದೊರಕಿಸಿಕೊಡುವ ಕೆಲಸವನ್ನು ಅತ್ಯಂತ ಪ್ರಾಮಾಣಿಕವಾಗಿ ಮಾಡಬೇಕಿದೆ.

ಆದರೆ ಇವತ್ತು ಸರ್ಕಾರಿ ನೌಕರರು ಎಂದರೆ ಎಲ್ಲರನ್ನು ಕಾಮಾಲೆ ಕಣ್ಣಿನಿಂದ ನೋಡುವಂತಹ ವಾತಾವರಣ ನಿರ್ಮಾಣವಾಗಿದೆ. ಅದಕ್ಕೆ ತಕ್ಕ ಕಾರಣವೂ ಇದೆ. ಹೀಗಾಗಿ ಸರ್ಕಾರಿ ನೌಕರರ ಸಂಘಟನೆ, ತಮ್ಮ ನ್ಯಾಯ ಬದ್ಧ ಹಕ್ಕುಗಳನ್ನ ಪಡೆಯಲು ಹೋರಾಟ ಮಾಡುವ ಜೊತೆಗೆ, ಸರ್ಕಾರಿ ನೌಕರರ ಹಕ್ಕು ಮತ್ತು ಕರ್ತವ್ಯಗಳ ಬಗ್ಗೆಯೂ ತಿಳುವಳಿಕೆ ನೀಡುವ ಕೆಲಸ ಮಾಡಬೇಕು.

ಮುಖ್ಯವಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುವ ಬಗ್ಗೆ ಸಂಘಟನೆಯಲ್ಲಿಯೂ ಚರ್ಚೆ ನಡೆಯಬೇಕು. ಆದರೆ ಸಂಘಟನೆ ಎನ್ನುವುದು ಇವತ್ತು ವೇತನ ಪರಿಷ್ಕರಣೆ ವಿಷಯಕ್ಕೆ ಮಾತ್ರ ಸೀಮಿತವಾದಂತಾಗಿದೆ.

ಹೀಗಾಗಿಯೇ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು, ಸರ್ಕಾರಿ ನೌಕರರ ಪೈಕಿ ಕೆಲ ಅಪ್ರಾಮಾಣಿಕರು ತುಂಬಿಕೊಂಡಿರುವುದನ್ನ ಒಪ್ಪಿಕೊಂಡಿದ್ದಾರೆ. ಅದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಕ್ರಮಗಳನ್ನು ಕೈಗೊಳ್ಳಲು ಸಿದ್ಧತೆ ಆರಂಭಿಸಿದ್ದಾರೆ.

ಅದರಲ್ಲೂ ವಾಲ್ಮೀಕಿ ನಿಗಮದ ಹಗರಣ ಬಯಲಿಗೆ ಬರುತ್ತಿದ್ದಂತೆ, ಹಣಕಾಸಿನ ವ್ಯವಹಾರದಲ್ಲಿ ಪಾರದರ್ಶಕತೆ ತರಲು, ನಿಗಮ ಮಂಡಳಿಗಳಿಗೆ ನೀಡಿದ ಹಣವನ್ನು ವಾಪಸ್ ಪಡೆದುಕೊಳ್ಳಲು ಮುಂದಾಗಿದ್ದಾರೆ. ಪ್ರಾಮಾಣಿಕ ಅಧಿಕಾರಿಗಳ ಕೊರತೆಯಿಂದಾಗಿ ಇವತ್ತು,

ಆರ್ಥಿಕ ಭ್ರಷ್ಟಾಚಾರ ಮಿತಿ ಮೀರುತ್ತಿದೆ. ಸರಕಾರಿ ನೌಕರ ಸಂಘಟನೆಗಳು ಈ ಬಗ್ಗೆ ಚಿಂತನೆ ನಡೆಸಬೇಕಾದ ಕಾಲ ಬಂದಿದೆ.

---

### ಶ್ರೀ ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪದಲ್ಲಿ ಕಾರ್ಯಕ್ರಮ

# ಹಡಪದ ಅಪ್ಪಣ್ಣನವರ 890ನೇ ಜಯಂತ್ಯುತ್ಸವ



**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರಕಾರ, ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಗದಗ ಜಿಲ್ಲಾ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘ ಇವರುಗಳ ಸಹಯೋಗದಲ್ಲಿ ನಿಜಸುಖಿ ಹಡಪದ ಅಪ್ಪಣ್ಣನವರ 890ನೇ ಜಯಂತ್ಯುತ್ಸವವನ್ನು ರವಿವಾರ ಮುಂಜಾನೆ 10.30ಕ್ಕೆ ಗದಗ ಶ್ರೀ ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪದಲ್ಲಿ ಆಚರಿಸಲಾಗುವುದು.

ಗದಗ ತೋಂಟದಾರ್ಯ ಸಂಸ್ಥಾನ ಮಠದ ಶ್ರೀ. ಮ.ನಿ.ಪ್ರ.ಜ. ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸುವರು. ವಿ.ಪ ಸಭಾಪತಿ ಬಸವರಾಜ ಹೊರಟ್ಟಿಯವರ ಉಪಸ್ಥಿತಿಯಲ್ಲಿ, ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರ ಅಧ್ಯಕ್ಷತೆಯಲ್ಲಿ ನಡೆಯುವದು.

ಮುಖ್ಯ ಅತಿಥಿಗಳಾಗಿ ಹಾವೇರಿ ಲೋಕಸಭಾ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿ, ವಿಧಾನ ಪರಿಷತ್ತಿನ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಬಾಗಲಕೋಟಿ ಲೋಕಸಭಾ ಕ್ಷೇತ್ರದ ಪಿ.ಸಿ. ಗದ್ದಿಗೌಡರ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಶಾಸಕರಾದ ಪ್ರದೀಪ ಶೆಟ್ಟರ, ಸಿ.ಸಿ. ಪಾಟೀಲ, ಚಂದ್ರು ಲಮಾಣಿ, ನಗರಸಭೆಯ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ ಆಗಮಿಸುವರು.

ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿಗಳಾದ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್.ಎಸ್, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಹಾಜರಿರುವರು.

ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ ಮತ್ತು ಕುಶಲ ಕರ್ಮಿಗಳಿಗೆ ಕಾಯಕರತ್ನ ಪ್ರಶಸ್ತಿ ಪ್ರದಾನ ಜರುಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಹುಲಕೋಟಿಯ ಮುಖ್ಯ ಶಿಕ್ಷಕರು ಮತ್ತು ಸಾಹಿತಿಗಳಾದ ಎ.ವಿ. ಪ್ರಭು ಹಡಪದ ಅಪ್ಪಣ್ಣನವರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ಮಾಡುವರು. ಕೆ.ಟಿ. ಭಜಂತ್ರಿ ವಚನ ಸಂಗೀತ ನಡೆಸುವರು. ವಿಶೇಷ ಆಮಂತ್ರಿತರಾಗಿ ಗದಗ ಜಿಲ್ಲಾ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ಅಧ್ಯಕ್ಷ ಮೋಹನ ಚಂದಪ್ಪನವ, ಕಲ್ಲಪ್ಪ ಹಡಪದ, ಸೋಮಣ್ಣ ಹಡಪದ, ಕಲ್ಲೇಶಪ್ಪ ಕುಡಗುಂಟಿ, ರಾಮಚಂದ್ರಪ್ಪ ಲಾಯದಗುಂದಿ, ದೇವು ಹಡಪದ, ಪುಟ್ಟರಾಜ ಹಡಪದ, ಮಲ್ಲಿಕಾರ್ಜುನ ಹಡಪದ ಮೊದಲಾದವರು ಆಗಮಿಸುವರು.

---

### ಶಿವಶರಣ ಹಡಪದ ಅಪ್ಪಣ್ಣ ಜಯಂತಿ ನಿಮಿತ್ತ ವಿಶೇಷ ಲೇಖನ

# ನಿಜಸುಖಿ ಶಿವಶರಣ–ಶ್ರೀ ಹಡಪದ ಅಪ್ಪಣ್ಣ

12ನೇ ಶತಮಾನವು ಮೌಢ್ಯತೆಯ ಕಾರ್ಮೋಡದಿಂದ ಸರಿದ ಸುಜ್ಞಾನ ಯುಗ, ಭಕ್ತಿ ಯುಗ, ವೈಚಾರಿಕತೆಯ ಯುಗ, ಸಮಾನತೆ ಸೌಹಾರ್ದತೆಯ ಕಂಡ ಯುಗ, ಅದುವೇ ಬಸವ ಮಹಾ ಯುಗ. ಈ ಬಸವ ಯುಗದ ಉತ್ಸಾಹಿ ಶಿವಶರಣರಲ್ಲಿ ಮತ್ತು ಸಾಮಾಜಿಕ ಕ್ರಾಂತಿಯ ಹರಿಕಾರರಲ್ಲಿ ಹಡಪದ ಅಪ್ಪಣ್ಣ ಒಬ್ಬರು. ಇವರು 'ಹಡಪದ' ಸಮಾಜದವರಾಗಿದ್ದು, ಬಸವಣ್ಣನವರ ಬಲಗೈ ಬಂಟನೆಂದೇ ಹೆಸರು ಪಡೆದಿದ್ದರು. ಬಸವಣ್ಣನವರ ಬಾಲ್ಯದ ಒಡನಾಡಿಗಳಾಗಿದ್ದ ಇವರು ವಿಶ್ವದ ಪ್ರಪ್ರಥಮ ಪ್ರಜಾಪ್ರಭುತ್ವದ ಸಂಸತ್ತು ಎಂದೇ ಹೆಸರಾದ 'ಅನುಭವ ಮಂಟಪ'ದಲ್ಲಿ ಬಸವಣ್ಣನವರಿಗೆ ಪ್ರಧಾನ ಕಾರ್ಯದರ್ಶಿಗಳಾಗಿ ಕಾರ್ಯನಿರ್ವಹಿಸಿದ ಹೆಗ್ಗಳಿಕೆ ಇವರ ಕಾರ್ಯಕ್ಷಮತೆಗೆ ಇಂದಿನವರಿಗೆ ಕನ್ನಡಿಯಾಗಿದೆ.

ಹಡಪದ ಅಪ್ಪಣ್ಣನವರು ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲೂಕಿನ ಮಸಬಿನಾಳ ಗ್ರಾಮದ ಚೆನ್ನವೀರಪ್ಪ–ದೇವಕಮ್ಮನವರ ಮಗ. ದೇಗಿನಾಳ ಗ್ರಾಮದ ಜೀರ ನಾಗಪ್ಪ–ಚೆನ್ನಬಸಮ್ಮನವರ ಮಗಳಾದ ಲಿಂಗಮ್ಮ




ಇವರ ಪತ್ನಿ. ಕ್ರಿ.ಶ 1160ರಂದು ಜನಿಸಿದ್ದಾರೆ ಎಂಬ ಪ್ರತೀತಿ ಇದೆ. ಇವರು 'ಬಸವಪ್ರಿಯ ಕೂಡಲ ಚೆನ್ನಬಸವಣ್ಣ' ಎಂಬ ಅಂಕಿತನಾಮದಲ್ಲಿ ಸುಮಾರು 250 ವಚನಗಳನ್ನು ರಚಿಸಿದ್ದಾರೆ. ಅವರ ಪತ್ನಿ ಲಿಂಗಮ್ಮ 'ಅಪ್ಪಣ್ಣಪ್ರಿಯ ಚೆನ್ನಬಸವಣ್ಣ' ಅಂಕಿತದಲ್ಲಿ 114 ವಚನಗಳನ್ನು ರಚಿಸಿದ್ದಾರೆ.

ಬನವಾಸಿಯ ಮಧುಕೇಶ್ವರ ದೇವಾಲಯದ ಶಿವೋತ್ಸವ ಮಂಟಪದ ಗಗ್ಗರಿ ಕಲ್ಲಿನಲ್ಲಿರುವ ಶರಣರ ಶಿಲ್ಪಗಳಲ್ಲಿ ಅಪ್ಪಣ್ಣನವರ ವಿಗ್ರಹವನ್ನು ನೋಡಬಹುದು. ಬಸವಾದಿ ಶರಣರ ಕಲ್ಯಾಣ ರಾಜ್ಯದಲ್ಲಿ ಕ್ಷೌರಿಕ ವೃತ್ತಿ ಸೇರಿ ಎಲ್ಲ ವೃತ್ತಿಗಳನ್ನು ಸಮಾನವಾಗಿ ಕಾಣಲಾಗಿತ್ತು. ವೃತ್ತಿಗಳನ್ನು ಕಾಯಕವೆಂದು ಕರೆದು ಎತ್ತರದ ಸ್ಥಾನಮಾನ ನೀಡಲಾಯಿತು. ಅವರು ಮಾಡುವ ಕಾಯಕ ಯಾವುದಾದರೂ ಅದು ಮೇಲೂ ಅಲ್ಲ, ಕೀಳೂ ಅಲ್ಲ, ತನು_ಮನ_ಧನವೆಂಬ ತ್ರಿಕರಣ ಶುದ್ಧವಾಗಿ ಮಾಡುವುದೇ ಕಾಯಕವಾಗಿದೆ.

ಹಡಪದ ಅಪ್ಪಣ್ಣನವರು ಐದು ಪ್ರಕಾರದಲ್ಲಿ ವಚನಾಂಕಿತಗಳನ್ನು ಬಳಸಿದ್ದಾರೆ. ಬಸವಪ್ರಿಯ ಕೂಡಲಚೆನ್ನಬಸವಣ್ಣಾ, ಬಸವಪ್ರಿಯ ಕೂಡಲಚೆನ್ನಸಂಗಮದೇವಾ, ಬಸವಪ್ರಿಯ ಕೂಡಲಸಂಗಮದೇವಾ, ಬಸವಪ್ರಿಯ ಕೂಡಲಸಂಗಮದೇವ ಪ್ರಭುವೆ, ಬಸವಪ್ರಿಯ ಕೂಡಲಸಂಗನಬಸವಣ್ಣ. ಈ ವಚನಾಂಕಿತಗಳಲ್ಲಿ 'ಬಸವಪ್ರಿಯ' ಎಂಬ ವಿಶೇಷಣ ಸ್ಥಾಯಿಯಾಗಿದೆ.

ಅಷ್ಟೇ ಅಲ್ಲದೆ ಸಂಗಮೇಶ್ವರದ ಅಪ್ಪಣ್ಣ ಹೆಸರಿನ ಎಲ್ಲ ವಚನಾಂಕಿತಗಳು ಹಡಪದ ಅಪ್ಪಣ್ಣನವರ ಕೂಡಲಚೆನ್ನಸಂಗಮದೇವ ವಚನಾಂಕಿತಕ್ಕೆ ಅನುಗುಣವಾಗಿವೆ! ಆದ್ದರಿಂದ ಹಡಪದ ಅಪ್ಪಣ್ಣ ಮತ್ತು ಸಂಗಮೇಶ್ವರದ ಅಪ್ಪಣ್ಣ ಹೆಸರಿನಲ್ಲಿ ಪ್ರಕಟವಾದ ವಚನಾಂಕಿತಗಳು ಬೇರೆ ಬೇರೆ ಅಲ್ಲ ಎಂಬುದು ಇದರಿಂದ ಸ್ಪಷ್ಟವಾಗುವುದು.

ಒಟ್ಟಾರೆಯಾಗಿ ಜಾತಿ, ವರ್ಣ, ವರ್ಗ, ಲಿಂಗಗಳನ್ನು ಆಧರಿಸಿ ಅಸಮಾನತೆಯಿಂದ ನಿರ್ಮಾಣಗೊಂಡಿದ್ದ ಸಮಾಜವನ್ನು ಧಿಕ್ಕರಿಸಿ, ಪ್ರತಿಯಾಗಿ ಸಹಬಾಳ್ವೆ, ಸಮಾನತೆ, ಪರಸ್ಪರ ಸಹಕಾರ, ಸಹಾನುಭೂತಿ, ಅರಿವು, ಆಚಾರ, ನಡೆನುಡಿ ಸಿದ್ಧಾಂತಗಳ ಆಧಾರದ ಮೇಲೆ ಜನಮುಖಿ ಸಮಾಜ ನಿರ್ಮಿಸಿದರು. ಬಸವಣ್ಣನವರಿಗೆ ಅಪ್ಪಣ್ಣನವರು ಪ್ರಾಣವೇ ಆಗಿದ್ದರೆಂಬುದಕ್ಕೆ ಕಲ್ಯಾಣಕ್ರಾಂತಿಯ ಕೊನೆಯ ದಿನಗಳನ್ನು ತಿಳಿದುಕೊಂಡರೆ ಗೊತ್ತಾಗುತ್ತದೆ. ಒಬ್ಬ ಕಾರ್ಯದರ್ಶಿ ಹೇಗೆ ಕಾರ್ಯನಿರ್ವಹಿಸಬೇಕೆಂಬುದಕ್ಕೆ ಹಡಪದ ಅಪ್ಪಣ್ಣನವರು ಒಂದು ಉತ್ತಮ ಉದಾಹರಣೆಯಾಗಿರುತ್ತಾರೆ. ಇವರ ಜೀವನದ ಬಗ್ಗೆ ಇನ್ನೂ ಹೆಚ್ಚಿನ ಸಂಶೋಧನೆಯಾಗಬೇಕಾಗಿದೆ.

ವಚನಕಾರ ಶಿವಶರಣ ಶ್ರೀ ಹಡಪದ ಅಪ್ಪಣ್ಣ ಜಯಂತಿಯ ಹಾರ್ದಿಕ ಶುಭಾಶಯಗಳು.



**– ಬಸವರಾಜ ಎಮ್.ಯರಗುಪ್ಪಿ. ಬಿಆರ್‌ಪಿ ಶಿರಹಟ್ಟಿ, ಲಕ್ಷ್ಮೇಶ್ವರ.**

---


### ಹಡಪದ ಅಪ್ಪಣ್ಣನವರ ಜಯಂತಿ ನಿಮಿತ್ತ ಸಾಂದರ್ಭಿಕ ಲೇಖನ

# ಬಸವಣ್ಣನ ನೆಚ್ಚಿನ ಹಡಪದ ಅಪ್ಪಣ್ಣ

'ಆಗುತಿವೆ ಉದಯ ಮಧ್ಯಾಹ್ನ ಅಸ್ತಮಾನ.
ಹೋಗುತಿವೆ ದಿನ ವಾರ ಮಾಸ ಸಂವತ್ಸರವು.
ಸಾವುತಿವೆ ಆಯುಷ್ಯ ಭಾಷೆ.
ಇವರೊಳು ಬೇಗದಿ ತಿಳಿದು ನೀಗಿ, ನಿಷ್ಪತ್ತಿಯಾದರೆ,
ಬಸವಪ್ರಿಯ ಕೂಡಲಚೆನ್ನಬಸವಣ್ಣ'

ಇಂತಹ ಶ್ರೇಷ್ಠಾತಿಶ್ರೇಷ್ಠ ವಚನಗಳನ್ನು ನೀಡಿದ ನಿಜ ಸುಖಿ ಹಡಪದ ಅಪ್ಪಣ್ಣನವರು ಸಮಾಜ ಸುಧಾರಣೆಗಾಗಿ ತಮ್ಮನ್ನೇ ತಾವು ಸಮರ್ಪಿಸಿಕೊಂಡು ಇಂದಿಗೂ ಪ್ರಸ್ತುತವಿರುವ ಶರಣ ಚೇತನರು. ಹನ್ನೆರಡನೇ ಶತಮಾನವು ಮೌಢ್ಯತೆಯ ಕಾರ್ಮೋಡದಿಂದ ಸರಿದು ಭವದ ಬೆಳಕಿನ ಬಸವ ಯುಗದ ಅನರ್ಘ್ಯ ಶರಣ ರತ್ನವೇ ನಿಜಸುಖಿ ಹಡಪದ ಅಪ್ಪಣ್ಣನವರು.

12ನೇ ಶತಮಾನದಲ್ಲಿ ಕಲ್ಯಾಣದ ಧಾರ್ಮಿಕ, ಸಾಮಾಜಿಕ ಕ್ಷೇತ್ರದಲ್ಲಿ ಕ್ರಾಂತಿ ಮಾಡಿದ ವಿಶ್ವಗುರು ಬಸವಣ್ಣನವರ ಅಂತರಂಗದ ಆಪ್ತ ಹಡಪದ ಅಪ್ಪಣ್ಣವರು.



ಬಸವಣ್ಣನವರ ಆತ್ಮೀಯ ಅಂತರಂಗದ ಅನುಭಾವಿ, ಆಪ್ತ ಕಾರ್ಯದರ್ಶಿ, ಅಲ್ಲದೇ ತಾಂಬೂಲನ್ನೊದಗಿಸುವ ಅಚ್ಚುಮೆಚ್ಚಿನ ಶರಣರಾಗಿದ್ದರು.

ಬಸವಣ್ಣನವರ ಸೇವಕನಾಗಿ ಕೊನೆಯವರೆಗೂ ಸೇವೆ ಮಾಡುತ್ತ ಲೌಕಿಕದಲ್ಲಿ ಮಾತ್ರವಲ್ಲದೇ ಪಾರಮಾರ್ಥಿಕ ವಿಷಯಗಳಲ್ಲಿಯೂ ಸಹಾಯಕನಾಗಿದ್ದ ಎಂಬುದು ಅಪ್ಪಣ್ಣನವರ ಹೆಗ್ಗಳಿಕೆ. ಬಸವಣ್ಣನವರ ಜೀವನದ ಮೊದಲಿನಿಂದ ಐಕ್ಯದವರೆಗೂ, ಬಸವಣ್ಣನವರ ಒಡನಾಡಿಯಾದವರು. ಅಪ್ಪಣ್ಣನಿಲ್ಲದಿದ್ದರೆ ಬಸವಣ್ಣನವರ ಕಾರ್ಯಕ್ರಮಗಳೇ ನಡೆಯುತ್ತಿರಲಿಲ್ಲ ಎಂದರೆ ಅದು ಅತಿಶಯವಲ್ಲ.

ಬಸವಣ್ಣ ತನ್ನ ಬಳಿ ಬರುವವರು ಮೊದಲು ಅಪ್ಪಣ್ಣನವರನ್ನು ಕಾಣಬೇಕು ಎಂಬ ಆಜ್ಞೆ ಮಾಡಿದ್ದರು ಎಂಬ ಪ್ರತೀತಿ ಇದೆ. ಅಷ್ಟರ ಮಟ್ಟಿಗೆ ಅವರಿಗೆ ಅಪ್ಪಣ್ಣನವರ ಮೇಲೆ ಪ್ರೀತಿ. ಶೂನ್ಯ ಸಂಪಾದನೆಯಲ್ಲಿ ಪ್ರಭುದೇವರು ಹಾಗೂ ಸಿದ್ಧರಾಮದೇವ ರು ಬಸವಣ್ಣನವರ ಅರಮನೆಯ ಬಾಗಿಲಲ್ಲಿ ಬಂದು ನಿಂತಾಗ ಅವರು ಪ್ರಭುದೇವರು ಎಂದು ಗುರುತಿಸುವಲ್ಲಿ ಸದೃಶ್ಯ ಪಾತ್ರ ನಿರ್ವಹಿಸಿದ್ದು ಅಪ್ಪಣ್ಣನವರು.

ವ್ಯಕ್ತಿ, ಸಮಾಜ ಹಾಗೂ ನಾಡಿನ ಸರ್ವಾಂಗ ಸುಂದರ ಬದುಕಿಗೆ ನೂರಾರು ಪ್ರಕಾರಗಳ ವೃತ್ತಿ–ಉದ್ಯೋಗಗಳು ಬೇಕು. ಈ ಉದ್ಯೋಗಗಳಲ್ಲಿಯೇ ಮೇಲು–ಕೀಳು ಎಂದು ಕಲ್ಪಿಸಿ ಜನರನ್ನು ಒಡೆದು ಆಳುವುದನ್ನು ಬಸವಣ್ಣನವರು ಸಹಿಸಲಿಲ್ಲ. ಅವರು ಉದ್ಯೋಗ–ವೃತ್ತಿಗಳಿಗೆ 'ಕಾಯಕ' ಎಂದು ಕರೆದು ಅದರ ಮೌಲಿಕತೆಯನ್ನು ಸಾರಿದರು. ಪ್ರಧಾನಿಯ ಕಾಯಕದಿಂದ–ಸೇವಕನ ಕಾಯಕದವರೆಗೆ, ಬ್ರಾಹ್ಮಣ ಕಾಂುಂಕದಿಂದ–ಭಂಗಿಂುಂ ಕಾಯಕದವರೆಗಿನ ಎಲ್ಲ ಕಾಯಕಗಳು ಸಮಾನವಾದವು.

ಇದರಿಂದ ಮೇಲು–ಕೀಳು, ಭೇದಭಾವವಿಲ್ಲದೇ ಸಮಾನತೆ–ಸ್ವಾತಂತ್ಯ–ಬಂಧುತ್ವದ ತಳಹದಿಯ ಮೇಲೆ ಸಮ ಸಮಾನ ಸಮಾಜ ನಿರ್ಮಾಣ ಕಾರ್ಯದ ಹೃದಯದಂತಿದ್ದ "ಅನುಭವ ಮಂಟಪ"ಕ್ಕೆ ಕಾಶ್ಮೀರದಿಂದ ಕನ್ಯಾಕುಮಾರಿವರೆಗಿನ ಅಸಂಖ್ಯಾತ ಶರಣಚೇತನಗಳು ಧಾವಿಸಿದವು.

ಈ ರೀತಿ ಕಲ್ಯಾಣಕ್ಕೆ ಬಂದವರಲ್ಲಿ ಹಡಪದ ಅಪ್ಪಣ್ಣ ಮತ್ತು ಲಿಂಗಮ್ಮನವರು.

ಒಬ್ಬ ಅನುಭಾವಿ ಕೇವಲ ತಾನೊಬ್ಬನೇ ದಿವ್ಯತೆಯನ್ನು ಸಾಧಿಸಿದರೆ ಸಾಲದು, ತನ್ನೊಂದಿಗೆ ಸಮಾಜವನ್ನೂ ಮೇಲೆತ್ತಬೇಕು. ಸಮಾಜವನ್ನು ಹಸನಾಗಿಸಬೇಕು. ಈ ಹಿನ್ನೆಲೆಯಲ್ಲಿ ಅಪ್ಪಣ್ಣನವರು ಅನುಭಾವ ಸಾಧನೆಯ ಬಗ್ಗೆ ಎಚ್ಚರಿಸಿದ್ದಾರೆ.

ಪತಿ ಅಪ್ಪಣ್ಣನವರಂತೆ ಶರಣೆ ಸತಿ ಲಿಂಗಮ್ಮನವರು ತಮ್ಮ ವಚನಗಳನ್ನು 'ಅಪ್ಪಣ್ಣಪ್ರಿಯ ಚೆನ್ನಬಸವಣ್ಣ' ನಾಮಾಂಕಿತದೊಂದಿಗೆ ರಚಿಸಿದ್ದಾರೆ. ಲಿಂಗಮ್ಮನವರು ಅನೇಕ ಬೆಡಗಿನ ವಚನಗಳನ್ನು ಕೂಡಾ ಬರೆದಿದ್ದಾರೆ. ಈ ಬೆಡಗಿನ ವಚನಗಳಲ್ಲಿ ನಿರೂಪಿತವಾಗಿರುವ ಅನುಭಾವವು ಆ ತಾಯಿಯ ಸಾಧನೆ–ಸಿದ್ಧಿಗಳ ದರ್ಶನ ಮಾಡಿಸುತ್ತದೆ.

ಬದುಕನ್ನು ಸಮರ್ಥ ರೀತಿಯಲ್ಲಿ ಮುನ್ನಡೆಸಿಕೊಂಡು ಹೋಗಲು ಶರಣ ದಂಪತಿಗಳಾದ ನಿಜಸುಖಿ ಅಪ್ಪಣ್ಣ ಹಾಗೂ ನಿಜಮುಕ್ತೆ ಲಿಂಗಮ್ಮನವರ ವಚನಗಳು ಇಂದಿಗೂ ಸರ್ವರಿಗೂ ದಾರಿ ದೀಪಗಳಾಗಿವೆ. ಬಸವ ಮಹಾಗುರುವಿನ, ಚಿಜ್ಞಾನಿ ಚೆನ್ನಬಸವಣ್ಣ ಗುರುವಿನ ಸಾನ್ನಿಧ್ಯದಲ್ಲಿ ಬಾಳಿ ಇಂದಿಗೂ ತಮ್ಮ ವಚನ ಶರೀರದಿಂದ ನಮಗೆಲ್ಲ ಸಂದೇಶ ನೀಡುತ್ತಿದ್ದಾರೆ.



**– ಈಶ್ವರ ಎಸ್.ಮೆಡ್ಲೇರಿ ಅಧ್ಯಕ್ಷರು, ತಾಲೂಕಾ ಕಸಾಪ–ಲಕ್ಷ್ಮೇಶ್ವರ.**

---

### ಮೂಡಾ ಹಗರಣ ಆರೋಪ


# ಸಿಎಂ ಸಿದ್ದರಾಮಯ್ಯ ಸೇರಿ ಆರು ಮಂದಿ ವಿರುದ್ಧ ಲೋಕಾಯುಕ್ತಕ್ಕೆ ದೂರು

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಆಪಾದಿತ ಮೂಡಾ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಪತ್ನಿ ಬಿ.ಎಂ ಪಾರ್ವತಿ ಸೇರಿ ಆರು ಮಂದಿ ವಿರುದ್ಧ ಲೋಕಾಯುಕ್ತಕ್ಕೆ ದೂರು ಸಲ್ಲಿಕೆಯಾಗಿದೆ.

ಸಿಎಂ ಸಿದ್ದರಾಮಯ್ಯ, ಪತ್ನಿ ಪಾರ್ವತಿ, ಇವರ ಸಹೋದರ ಬಿ.ಎಂ ಮಲ್ಲಿಕಾರ್ಜುನಸ್ವಾಮಿ, ಮೂಡಾದ ಮಾಜಿ ಅಧ್ಯಕ್ಷರಾದ ಬಸವನಗೌಡ, ಹೆಚ್.ವಿ ರಾಜೀವ್ ಹಾಗೂ ಆಯುಕ್ತರಾಗಿದ್ದ ಡಿ.ಬಿ ನಟೇಶ್ ವಿರುದ್ಧ ಅಧಿಕಾರ ದುರುಪಯೋಗ, ವಂಚನೆ ಹಾಗೂ ಭ್ರಷ್ಟಾಚಾರ ಆರೋಪದಡಿ ಬಿಜೆಪಿ ಮುಖಂಡ ಎನ್.ಆರ್ ರಮೇಶ್ ದೂರು ದಾಖಲಿಸಿದ್ದಾರೆ.

ದೂರು ನೀಡಿದ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ರಮೇಶ್, "1997–98ರಲ್ಲಿ ಜೆ.ಹೆಚ್ ಪಟೇಲ್ ಅವರ ಸರ್ಕಾರದಲ್ಲಿ ಉಪಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರು ಸ್ವಾಧೀನಪಡಿಸಿಕೊಂಡ ದೇವನೂರು ಮೂರನೇ ಬಡಾವಣೆಯನ್ನು ಮೂಡಾ ಕೈ ಬಿಡುವಂತೆ ಅಧಿಸೂಚನೆ ಹೊರಡಿಸಿ ಅಧಿಕಾರ ದುರುಪಯೋಗಪಡಿಸಿಕೊಂಡಿದ್ದಾರೆ.





ಅಲ್ಲದೆ 2004–05ರಲ್ಲಿ ಧರ್ಮಸಿಂಗ್ ಅವರ ಸರ್ಕಾರದಲ್ಲೂ ಉಪ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರು, ಇದೇ ಭೂಮಿಯನ್ನು ಮೃತ ಲಿಂಗ ಎಂಬ ವ್ಯಕ್ತಿಯ ಹೆಸರಿನಲ್ಲಿ ಭೂ ಪರಿವರ್ತನೆ ಮಾಡಿಸಿದ್ದರು" ಎಂದು ಆರೋಪಿಸಿದ್ದಾರೆ.

ಸಿದ್ದರಾಮಯ್ಯ ಅವರು ರಾಜಕೀಯ ಪ್ರಭಾವದಿಂದ ತಮ್ಮ ಪತ್ನಿಯ ಹೆಸರಿಗೆ ಕಾನೂನು ಬಾಹಿರವಾಗಿ ಬದಲಿ ನಿವೇಶನ ಪಡೆದು, ಈ ಮೂಲಕ 40 ಕೋಟಿ ರೂಪಾಯಿಗಿಂತ ಹೆಚ್ಚು ಹಣ ಸರ್ಕಾರಕ್ಕೆ ನಷ್ಟವಾಗಲು ಕಾರಣರಾಗಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಸಿಎಂ ಪತ್ನಿ ಹೆಸರಿನಲ್ಲಿರುವ 3.16 ಎಕರೆ ಭೂಮಿ ಸ್ವಾಧೀನಪಡಿಸಿಕೊಂಡು, ಬಳಿಕ 1998ರಲ್ಲಿ ಭೂಸ್ವಾಧೀನದಿಂದ ಕೈ ಬಿಟ್ಟಿತ್ತು. 2005ರಲ್ಲಿ ವ್ಯವಸಾಯ ಭೂಮಿಯಿಂದ ವಸತಿ ಉದ್ದೇಶಕ್ಕೆ ಭೂ ಪರಿವರ್ತನೆಯಾಗಿತ್ತು. ಸಿದ್ದರಾಮಯ್ಯ ಅವರ ಭಾಮೈದ ಮಲ್ಲಿಕಾರ್ಜುನಸ್ವಾಮಿ ಹೆಸರಿನಲ್ಲಿದ್ದ ಭೂಮಿಯನ್ನು ಸಹೋದರಿ ಪಾರ್ವತಿಗೆ ಭೂ ದಾನ ಮಾಡಿದ್ದರು ಎಂದು ಉಲ್ಲೇಖಿಸಲಾಗಿದೆ.

ಈ ಪ್ರಕರಣದಲ್ಲಿ ಬಿ.ಎಂ ಪಾರ್ವತಿಯವರಿಗೆ ವಾಸ್ತವವಾಗಿ ದೇವನೂರು 3ನೇ ಹಂತದ ಬಡಾವಣೆಯಲ್ಲಿ ಹಂಚಿಕೆಯಾಗಿದ್ದ ನಿವೇಶನಗಳಿಗೆ ಬದಲಾಗಿ, ಅದಕ್ಕಿಂತಲೂ ಹತ್ತಾರು ವರ್ಷಗಳ ಹಿಂದೆಯೇ ಮುಡಾ ಅಭಿವೃದ್ಧಿಪಡಿಸಿರುವ "ವಿಜಯನಗರ 3 ಮತ್ತು 4ನೇ ಹಂತದ ಬಡಾವಣೆ" ಗಳಲ್ಲಿನ ಅತ್ಯಂತ ಆಯಕಟ್ಟಿನ ಸ್ಥಳಗಳಲ್ಲಿರುವ ದುಬಾರಿ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಎಂದು ದೂರಿನಲ್ಲಿ ಹೇಳಲಾಗಿದೆ.

ರಾಜ್ಯದ ವಿರೋಧ ಪಕ್ಷದ ನಾಯಕರಾಗಿದ್ದ ಸಿದ್ಧರಾಮಯ್ಯನವರ ರಾಜಕೀಯ ಪ್ರಭಾವಗಳಿಗೆ ಒಳಗಾಗಿ ಮುಡಾದ ಅಧ್ಯಕ್ಷರಾಗಿದ್ದ ಹೆಚ್.ವಿ ರಾಜೀವ್ ಮತ್ತು ಆಯುಕ್ತರಾಗಿದ್ದ ಡಿ.ಬಿ ನಟೇಶ್ ಅವರು ಈ ಕಾನೂನುಬಾಹಿರ ಕೃತ್ಯವನ್ನು ಎಸಗಿದ್ದಾರೆ ಎಂದು ಆರೋಪಿಸಲಾಗಿದೆ.

---

# ಮೈಸೂರು–ಕೊಡಗು ಸಂಸದ ಯದುವೀರ್ ಒಡೆಯರ್ ಆಯ್ಕೆ ಅಸಿಂಧು ಕೋರಿ ಹೈಕೋರ್ಟ್‌ಗೆ ಅರ್ಜಿ

**■ ವಿಜಯಸಾಕ್ಷಿ ಸುದ್ದಿ, ಮೈಸೂರು**

ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆಯ್ಕೆ ಅಸಿಂಧುಗೊಳಿ, ಮರು ಚುನಾವಣೆ ನಡೆಸಲು ಕೋರಿ ಕರ್ನಾಟಕ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿದೆ ಎಂದು ಬಾರ್ & ಬೆಂಚ್ ವರದಿ ಮಾಡಿದೆ.

ಸಕಾರಣವಿಲ್ಲದೆ ತನ್ನ ನಾಮಪತ್ರ ತಿರಸ್ಕರಿಸಿದ್ದ ಚುನಾವಣಾಧಿಕಾರಿ ಕ್ರಮವನ್ನು ಪ್ರಶ್ನಿಸಿ ಬಹುಜನ ಸಮಾಜವಾದಿ ಪಕ್ಷದ (ಬಿಎಸ್‌ಪಿ) ಅಭ್ಯರ್ಥಿ ರೇವತಿ ರಾಜ್ ಅಲಿಯಾಸ್



ಭೀಮಪುತ್ರಿ ರೇವತಿ ರಾಜ್ ಚುನಾವಣಾ ತಕರಾರು ಅರ್ಜಿ ಸಲ್ಲಿಸಿದ್ದಾರೆ ಎಂದು ವರದಿ ಹೇಳಿದೆ.

ಅರ್ಜಿಯಲ್ಲಿ ಚುನಾವಣಾ ಆಯೋಗ, ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಇತರೆ ಪರಾಜಿತ ಅಭ್ಯರ್ಥಿಗಳನ್ನು ಪ್ರತಿವಾದಿಗಳನ್ನಾಗಿ ಮಾಡಲಾಗಿದೆ.

2024ರ ಏಪ್ರಿಲ್ 4ರಂದು ಚುನಾವಣಾ ಅಧಿಕಾರಿಗೆ ನಾಮಪತ್ರ ಸಲ್ಲಿಸಲಾಗಿತ್ತು. ಆದರೆ, ನಾಮಪತ್ರದ ಕಲಂ 7, 7(ಎ), 7(ಎ)(ಬಿ) ಗಳನ್ನು ಸರಿಯಾದ ರೀತಿಯಲ್ಲಿ ಭರ್ತಿ ಮಾಡಿಲ್ಲ. ಆದ ಕಾರಣ ಏಪ್ರಿಲ್ 5ರ ಬೆಳಿಗ್ಗೆ 11 ಗಂಟೆಯ ಒಳಗಾಗಿ ಸರಿಯಾಗಿ ಭರ್ತಿ ಮಾಡಿ ನಾಮಪತ್ರ ಸಲ್ಲಿಸಬೇಕು ಎಂದು ಚುನಾವಣಾಧಿಕಾರಿ ಸೂಚಿಸಿದ್ದರು. ಸೂಕ್ತ ಸಮಯದಲ್ಲಿ ಭರ್ತಿ ಮಾಡಿ ನಾಮಪತ್ರ ಸಲ್ಲಿದ್ದರೂ ತಮ್ಮ ನಾಮಪತ್ರ ತಿರಸ್ಕರಿಸಲಾಗಿದೆ. ಈ ಸಂಬಂಧ ರಾಜ್ಯ ಮುಖ್ಯ ಚುನಾವಣಾ ಆಯುಕ್ತರಿಗೆ ಪತ್ರದ ಮೂಲಕ ದೂರು ಸಲ್ಲಿಸಿದ್ದರೂ, ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಅರ್ಜಿಯಲ್ಲಿ ವಿವರಿಸಲಾಗಿದೆ.

"ನಮ್ಮ ನಾಮಪತ್ರ ತಿರಸ್ಕರಿಸಿದ್ದ ಅಂದಿನ ಚುನಾವಣಾಧಿಕಾರಿ/ಜಿಲ್ಲಾಧಿಕಾರಿ ಕೆ ವಿ ರಾಜೇಂದ್ರ ಅವರ ಆದೇಶವನ್ನು ಬದಿಗೆ ಸರಿಸಬೇಕು. ಯದುವೀರ್ ಆಯ್ಕೆ ಅಸಿಂಧುಗೊಳಿಸಿ, ಭಾರತೀಯ ಚುನಾವಣಾ ಆಯೋಗ ಮತ್ತು ರಾಜ್ಯ ಚುನಾವಣಾ ಆಯೋಗಕ್ಕೆ ಹೊಸದಾಗಿ ಚುನಾವಣೆ ನಡೆಸಲು ಆದೇಶಿಸಬೇಕು" ಎಂದು ರೇವತಿ ರಾಜ್ ಅವರು ಅರ್ಜಿಯಲ್ಲಿ ಕೋರಿರುವುದಾಗಿ ವರದಿ ತಿಳಿಸಿದೆ.

ಎಂಜಿಎಂ ಫೌಂಡೇಷನ್ ಶಾಲಾ ಮಕ್ಕಳಿಂದ ಗಮನ ಸೆಳೆದ ಡೆಂಘೀ ಜಾಗೃತಿ ಜಾಥಾ

# ಇಲಾಖೆಯೊಂದಿಗೆ ಸಾರ್ವಜನಿಕರ ಸಹಕಾರವೂ ಮುಖ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಎಂಜಿಎಂ ಫೌಂಡೇಶನ್ ಅನೇಕ ಕಾರ್ಯಕ್ರಮಗಳ ಮೂಲಕ ಸಮಾಜಮುಖಿ ಕಾರ್ಯ ಮಾಡುತ್ತಿದ್ದು, ಇದೀಗ ಎಲ್ಲೆಡೆ ಕಾಡುತ್ತಿರುವ ಡೆಂಘೀ ರೋಗದ ಕುರಿತು ಜಾಗೃತಿ ಮೂಡಿಸುವ ಕಾರ್ಯವನ್ನು ಶನಿವಾರ ಹಮ್ಮಿಕೊಂಡಿತ್ತು. ಸಂಸ್ಥೆಯು ಈ ಜನಪರ ಕಾಳಜಿಯ ಹಾಗೂ ಮಾದರಿ ಕಾರ್ಯಕ್ರಮ ರೂಪಿಸಿ ಎಲ್ಲರ ಗಮನ ಸೆಳೆಯಿತು.

ಪಟ್ಟಣದ ಎಂಜಿಎಂ ಫೌಂಡೇಶನ್, ಎಂಜಿಎಂ ಯೂನಿವರ್ಸಲ್ ಸ್ಕೂಲ್, ಮುಕ್ತಿ ಮಂದಿರ ಮಹರ್ಷಿ ಪ್ರಿ ಪ್ರೈಮರಿ ಸ್ಕೂಲ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಡೆಂಘೀ ಜಾಗ್ರತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಶನಿವಾರ ಮುಂಜಾನೆ ಪಟ್ಟಣದ ಶಿಗ್ಲಿ ನಾಕಾದಲ್ಲಿ ನೂರಾರು ವಿದ್ಯಾರ್ಥಿಗಳು ಮಾನವ ಸರಪಳಿ ನಿರ್ಮಿಸಿ ರೋಗದ ಕುರಿತು ಸಾರ್ವಜನಿಕರಲ್ಲಿ ಜಾಗ್ರತಿ ಮೂಡಿಸಿದರು. ಜಾಥಾಕ್ಕೆ ಸಂಸ್ಥೆಯ ಮುಖ್ಯಸ್ಥ ಬಸವೇಶ ಮಹಾಂತ್‌ಶೆಟ್ಟರ್ ಚಾಲನೆ ನೀಡಿದರು. ಅಲ್ಲಿಂದ ಪ್ರಾರಂಭವಾದ ಜಾಥಾ ಪೇಟೆ ಮಾರ್ಗವಾಗಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ 1ನ್ನು ತಲಪಿ ಅಲ್ಲಿ ಸಭೆಯಾಗಿ ಮಾರ್ಪಟ್ಟಿತು.




ಕಾರ್ಯಕ್ರಮದಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ ಮಾತನಾಡಿ, ರಾಜ್ಯದಲ್ಲಿ ದಿನದಿಂದ ದಿನಕ್ಕೆ ಡೆಂಘೀ ಹರಡುವಿಕೆ ಪ್ರಮಾಣ ಅಧಿಕವಾಗುತ್ತಿದ್ದು ಡೆಂಘೀ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಿರ್ಮೂಲನೆ ಮಾಡುವ ಮೂಲಕ ರೋಗನಿಯಂತ್ರಣಕ್ಕೆ ಮುಂದಾಗಬೇಕು. ಪ್ರಸಕ್ತ ವರ್ಷದಲ್ಲಿ ಡೆಂಘೀ ಕಾಯಿಲೆ ಅಧಿಕವಾಗಿದ್ದು, ಲಾರ್ವಾ ಸಮೀಕ್ಷೆ ಕಾರ್ಯವನ್ನು ಸರಿಯಾಗಿ ನಿರ್ವಹಿಸಬೇಕು. ಅಲ್ಲದೇ ಲಾರ್ವಾ ಸಮೀಕ್ಷೆ ವೇಳೆ ಮನೆ ಮನೆಗೆ ತೆರಳಿ ಕುಟುಂಬದ ಸದಸ್ಯರಿಗೆ ಸೊಳ್ಳೆಗಳ ಉತ್ಪತ್ತಿ ತಾಣಗಳ ಬಗ್ಗೆ ಮಾಹಿತಿ ನೀಡಿ ಅವುಗಳನ್ನು ಸಂಪೂರ್ಣ ನಾಶಪಡಿಸುವ ವಿಧಾನವನ್ನೂ ಸಹ ತಿಳಿಸಿಕೊಡಬೇಕು ಎಂದರು.

ಸಂಸ್ಥೆಯ ಮುಖ್ಯಸ್ಥ ಬಸವೇಶ ಮಹಾಂತಶೆಟ್ಟರ ಮಾತನಾಡಿ, ಡೆಂಘೀ ಜ್ವರವನ್ನು ತಡೆಗಟ್ಟುವ ನಿಟ್ಟಿನಲ್ಲಿ ಪ್ರತಿಯೊಬ್ಬ ನಾಗರಿಕರು ಸ್ವಚ್ಛತೆ ಕಾಪಾಡಿಕೊಳ್ಳುವದು ಅವಶ್ಯ. ನಮ್ಮ ಸುತ್ತಲಿನ ಪರಿಸರ ಕಾಪಾಡುವ ನಿಟ್ಟಿನಲ್ಲಿ ಇಲಾಖೆಗಳೊಂದಿಗೆ ಸಾರ್ವಜನಿಕರ ಸಹಕಾರವೂ ಮುಖ್ಯವಾಗಿದ್ದು, ಈ ನಿಟ್ಟಿನಲ್ಲಿ ಎಂಜಿಎಂ ಫೌಂಡೇಷನ್ ಶಿಕ್ಷಣ ಸೇವೆಯ ಜತೆಗೆ ಪರಿಸರ, ಆರೋಗ್ಯ, ಸಾಮಾಜಿಕ, ಧಾರ್ಮಿಕ ಚಿಂತನೆಗಳ ಕಾರ್ಯಕ್ರಮಗಳನ್ನು ರೂಪಿಸಿಕೊಂಡು ಬರುತ್ತಿದೆ ಎಂದು ಹೇಳಿದರು.

ಹಿರಿಯ ಆರೋಗ್ಯ ನಿರೀಕ್ಷಕ ಬಿ.ಎಸ್. ಹಿರೇಮಠ ಡೆಂಘೀ ಕುರಿತು ಉಪನ್ಯಾಸ ನೀಡಿ, ಯಾವುದೇ ಜ್ವರವಿದ್ದರೂ ಮೊದಲು ರಕ್ತ ಪರೀಕ್ಷೆ ಮಾಡಿಸಬೇಕು. ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಚರಂಡಿ ನಾಲೆಗಳಲ್ಲಿ ಕಸಕಡ್ಡಿಗಳನ್ನು ಎಸೆಯದೇ ನೀರಿನ ಸರಾಗ ಹರಿಯುವಿಕೆಗೆ ತಡೆಯಾಗದಂತೆ ನೋಡಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಸಾಹಿತಿ ಪೂರ್ಣಾಜಿ ಖರಾಟೆ, ರಮೇಶ್ ನವಲೆ, ಎನ್.ಆರ್. ಸಾತಪೂತೆ, ಗಂಗಾಧರ ಪುರಾಣಿಕಮಠ, ಎಸ್.ಎಫ್. ಕೊಡ್ಲಿ, ಮುಖೋಪಾಧ್ಯಾಯೆ ಕವಿತಾ ಮೆಣಸಗಿ ಸೇರಿದಂತೆ ಶಿಕ್ಷಕರು ಉಪಸ್ಥಿತರಿದ್ದರು. ಶ್ವೇತಾ ಪೂಜಾರ ನಿರೂಪಿಸಿದರು.

# ಪಂಚಮಸಾಲಿ ಸಮಾಜ ಬಾಂಧವರ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಪಂಚಮಸಾಲಿ ಸಮಾಜ ಸೇವಾ ಟ್ರಸ್ಟ್‌ನ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಪೂರ್ವಭಾವಿಯಾಗಿ ಜುಲೈ 22ರ ಮಧ್ಯಾಹ್ನ 4 ಗಂಟೆಗೆ ಎಸ್.ಬಿ. ಸಂಕಣ್ಣವರ ಮಿಲ್‌ನಲ್ಲಿ ಸಭೆ ಕರೆಯಲಾಗಿದೆ.

ಅಖಿಲ ಭಾರತ ಪಂಚಮಸಾಲಿ ಸಮಾಜದ ಕೂಡಲ ಸಂಗಮ ಪೀಠ ಹಾಗೂ ಹರಿಹರ ಪೀಠ ಪಂಚಮಸಾಲಿ ಯುವ ಘಟಕ, ಮಹಿಳಾ ಘಟಕ ಸಮಾಜದ ಸಂಘಟನೆಗಳಾದ ಬಸವ ಸೈನ್ಯ, ಪಂಚ ಸೈನ್ಯ ಹಾಗೂ ಗದಗ ಜಿಲ್ಲೆಯ ಎಲ್ಲಾ ಪಂಚಮಸಾಲಿ ಸಂಘಟನೆಗಳ ಸಮಾಜ ಬಾಂಧವರು ಹಾಗೂ ಜಿಲ್ಲೆಯ ಹಾಲಿ ಮತ್ತು ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರು, ತಾಲೂಕು ಪಂಚಾಯತ್ ಸದಸ್ಯರು, ನಗರಸಭಾ ಸದಸ್ಯರು, ಗ್ರಾಮ ಪಂಚಾಯತ್ ಸದಸ್ಯರು, ಜಿಲ್ಲೆಯ ಎಲ್ಲಾ ನಗರ ಹಾಗೂ ಪಟ್ಟಣ ವಿವಿಧ ಗ್ರಾಮಗಳ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕಾರ್ಯದರ್ಶಿ ಅನಿಲ್‌ಕುಮಾರ್ ಎಸ್.ಪಾಟೀಲ್ ವಿನಂತಿಸಿದ್ದಾರೆ.



■ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗ

ಬಾಗಲಕೋಟ ಮತ್ತು ಚಿತ್ರದುರ್ಗ ಭೋವಿ ಪೀಠದ ಜಗದ್ಗುರುಗಳಾದ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಅವರ ದೀಕ್ಷಾ ರಜತ ಮಹೋತ್ಸವ ಸಮಾರಂಭದ ನಿಮಿತ್ತ ಶನಿವಾರ ಚಿತ್ರದುರ್ಗದಲ್ಲಿ ನಡೆದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಕೆ.ಪಿ.ಎಸ್.ಸಿ ಸದಸ್ಯರಾದ ದೇವಪ್ಪ, ಐಎಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಸಂತ ಅವರ ಶೈಕ್ಷಣಿಕ ಸಾಧನೆಗೆ ಗದಗ ಜಿಲ್ಲಾ ಸರಕಾರಿ ನೌಕರ ಸಂಘದ ಗೌರವಾಧ್ಯಕ್ಷರು ಹಾಗೂ ಗದಗ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ತಾಲೂಕು ಅಧಿಕಾರಿ ಡಾ. ಬಸವರಾಜ ಬಳ್ಳಾರಿ ಅವರ ಪರಿವಾರದವರು ಅಭಿನಂಧಿಸಿ, ಶುಭ ಹಾರೈಸಿದರು.



■ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗ

ಬಾಗಲಕೋಟ ಮತ್ತು ಚಿತ್ರದುರ್ಗ ಭೋವಿ ಪೀಠದ ಜಗದ್ಗುರುಗಳಾದ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಅವರ ದೀಕ್ಷಾ ರಜತ ಮಹೋತ್ಸವ ಸಮಾರಂಭದ ಶನಿವಾರ ಚಿತ್ರದುರ್ಗದಲ್ಲಿ ನಡೆದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಕೆಪಿಎಸ್‌ಸಿ ಸದಸ್ಯ ದೇವಪ್ಪ, ಐಎಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಸಂತ, ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಶೇ.96ರಷ್ಟು ಅಂಕಗಳನ್ನು ಗಳಿಸಿ ಶೈಕ್ಷಣಿಕ ಸಾಧನೆ ಮೆರೆದ ಸ್ಫೂರ್ತಿ ಬಸವರಾಜ ಬಳ್ಳಾರಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರಾದ ಶಿವರಾಜ ತಂಗಡಗಿ, ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿಗಳು ಸೇರಿದಂತೆ ಹಲವರು ಸನ್ಮಾನಿಸಿ, ಅಭಿನಂಧಿಸಿದರು.

# ನಮ್ಮ ಹೊಲ ನಮ್ಮ ರಸ್ತೆ ಕಾಮಗಾರಿ ಪ್ರಾರಂಭಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಾ ವ್ಯಾಪ್ತಿಯಲ್ಲಿ ರೈತರ ಹೊಲಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ನಿರ್ಮಾಣ ಮಾಡುವಂತೆ ಒತ್ತಾಯಿಸಿ ಭಾರತಿಯ ಕಿಸಾನ ಸಂಘದ ತಾಲೂಕಾಧ್ಯಕ್ಷ ಟಾಕಪ್ಪ ಸಾತಪುತೆ ನೇತೃತ್ವದಲ್ಲಿ ಅನೇಕ ರೈತರು ಶುಕ್ರವಾರ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರಿಗೆ ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ತಾಲೂಕಿನಾದ್ಯಂತ ನಮ್ಮ ಹೊಲ ನಮ್ಮ ರಸ್ತೆ ಯೋಜನೆ ಸಮರ್ಪಕವಾಗಿ ಜಾರಿಗೆ ಬರಬೇಕು. ಪಟ್ಟಣದ ದೊಡ್ಡುರ ರಸ್ತೆ ಹೊಂದಿಕೊಂಡಿರುವ ರೈತರ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ಜಂಗಳಕೇರಿ ರಸ್ತೆ ಅಭಿವೃದ್ಧಿಪಡಿಸಬೇಕು ಎಂದು ಮನವಿ ಮಾಡಿದ ಅವರು, ತಾಲೂಕಿನ ಮುನಿಯನ ತಾಂಡಾ, ಹಾಗೂ ಉಂಡೆನಹಳ್ಳಿ ಗ್ರಾಮಕ್ಕೆ ಈ ಮಾರ್ಗದ ಸಂಪರ್ಕ ಹತ್ತಿರವಾಗುವುದರಿಂದ ರೈತರ ಜಮೀನುಗಳಿಗೆ ತೆರಳಲು ಮಳೆಗಾಲದಲ್ಲಿ ಸಮಸ್ಯೆಯಾಗುತ್ತಿದೆ. ಇದಕ್ಕೆ ಸಂಬಂಧಪಟ್ಟ ಜನಪ್ರತಿನಿಧಿಗಳು, ಅಧಿಕಾರಿಗಳು ರಸ್ತೆಯನ್ನು ಡಾಂಬರೀಕರಣ ಮಾಡಿ ಅಭಿವೃದ್ಧಿಪಡಿಸಿದರೆ ರೈತರಿಗೆ ಅನೂಕೂಲವಾಗುವದು. ಈ ಹಿನ್ನೆಲೆಯಲ್ಲಿ ಅನೂಕೂಲ ಕಲ್ಪಿಸುವಂತೆ ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಈ ಕುರಿತಂತೆ ಸಂಬಂಧಿಸಿದ ಇಲಾಖೆಯೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ರೈತರಾದ ಬಸಣ್ಣ ಬೆಂಡಿಗೇರಿ, ಚಂದ್ರಣ್ಣ ಮೆಕ್ಕಿ, ಸೋಮಣ್ಣ ಗೌರಿ, ರಾಮಣ್ಣ ಗೌರಿ, ಮಹಾದೇವಪ್ಪ ಸಾತಪುತೆ, ಅನಿಲ ಮುಳುಗುಂದ, ಬಸಣ್ಣ ಉಮಚಗಿ, ಶಂಕ್ರಪ್ಪ ಗುಡಗೇರಿ, ಅಪ್ಪಣ್ಣ ಸುಣಗಾರ ಸೇರಿದಂತೆ ಅನೇಕರಿದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೋಣ ತಾಲೂಕಿನ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಯನ್ನು ಕರ್ನಾಟಕ ಕಾನೂನು ಅಧಿಕಾರಿಗಳ ನಿಯಮಗಳನ್ವಯ ಅಭ್ಯರ್ಥಿಯಿಂದ ತುಂಬಲು 7 ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಜುಲೈ 31 ರೊಳಗೆ ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಕಚೇರಿ ವೇಳೆಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

# ಆರ್‌ಎನ್‌ಕೆಯವರಿಗೆ ಹೃದಯಸ್ಪರ್ಶಿ ಗುರುವಂದನೆ



■ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡದ ವಿದ್ಯಾರಣ್ಯ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ಹಳೆಯ ವಿದ್ಯಾರ್ಥಿಗಳು ಗದುಗಿಗೆ ಆಗಮಿಸಿ ತಾವು ಕಲಿತ ಕಾಲೇಜಿನ ಗುರುಗಳಾದ ಆರ್.ಎನ್. ಕುಲಕರ್ಣಿ ಅವರಿಗೆ ಗುರುವಂದನೆ ಸಲ್ಲಿಸಿದರು.

ಧಾರವಾಡ, ಹುಬ್ಬಳ್ಳಿಯಿಂದ ಪ್ರಕಾಶ ಭೋರಾಪೂರ, ವಿಠ್ಠಲ ಮಳಾವಿ, ಪ್ರಕಾಶ ಸೂರ್ಯವಂಶಿ, ಮೋಹನ ದೇಸಾಯಿ ಮೊದಲಾದವರು ಆಗಮಿಸಿ, ಗದುಗಿನ ಸನ್‌ರೈಸ್ ಶಾಲಾ ಭವನದಲ್ಲಿ ಹಿರಿಯ ರಂಗಕರ್ಮಿ ಆರ್‌ಎನ್‌ಕೆ ಅವರಿಗೆ ಗುರುವಂದನೆ ಸಮರ್ಪಿಸಿದ್ದು ವಿಶೇಷವಾಗಿತ್ತು.

ಈ ವೇಳೆ ಗಣ್ಯರಾದ ಪ್ರಕಾಶ ಭೋರಾಪೂರ ಮಾತನಾಡಿ, ಆರ್.ಎನ್. ಕುಲಕರ್ಣಿ ಗುರುಗಳು ಸತತ ಪ್ರರಿಶ್ರಮದಿಂದ ಹಗಲು ರಾತ್ರಿ ಎನ್ನದೇ ನಮಗೆ ಪಾಠ ಮಾಡಿರುವುದನ್ನು ನಾವು ಇಂದಿಗೂ ನೆನೆಯುತ್ತೇವೆ. ಅವರು ನಮ್ಮಿಂದ ಭಾಷಣ ಹಾಗೂ ನಾಟಕ ಮುಂತಾದ ಅನೇಕ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಮಾಡಿಸಿ ನಮ್ಮ ವ್ಯಕ್ತಿತ್ವ ನಿರ್ಮಾಣಕ್ಕೆ ಕಾರಣರಾಗಿದ್ದಾರೆ. ಅವರು ಹಾಕಿಕೊಟ್ಟ ದಾರಿಯಲ್ಲಿ ನಡೆದು ಉನ್ನತ ಹುದ್ದೆಯೊಂದಿಗೆ ಜೀವನ ರೂಪಿಸಿಕೊಂಡಿದ್ದೇವೆ ಎಂದರು.

ಸನ್ಮಾನ ಸ್ವೀಕರಿಸಿದ ಹಿರಿಯ ರಂಗಕರ್ಮಿ ಆರ್‌ಎನ್‌ಕೆ ಮಾತನಾಡಿ, ತಮ್ಮನ್ನು ಅಭಿನಂದಿಸಲು ಬಂದ ಧಾರವಾಡದ ವಿದ್ಯಾರ್ಥಿಗಳು ಉನ್ನತ ಹುದ್ದೆಯಲ್ಲಿರುವುದು ಸಂತಸ ತಂದಿದೆ. ವಿದ್ಯಾರ್ಥಿಗಳು ಸಾಧನೆ ಮಾಡಿದರೆ ಅದುವೇ ಗುರುವಿಗೆ ಸಮಾಧಾನ ನೀಡುತ್ತದೆ ಎಂದರು.

ರಂಗ ಕಲಾವಿದರಾದ ಮೌನೇಶ ಸಿ.ಬಡಿಗೇರ(ನರೇಗಲ್ಲ) ಸರ್ವರನ್ನು ಸ್ವಾಗತಿಸಿದರು. ಉಪನ್ಯಾಸಕ ಡಾ. ದತ್ತಪ್ರಸನ್ನ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ವಿಶ್ವನಾಥ ಬೇಂದ್ರ ವಂದಿಸಿದರು.

# ಜೆಡಿಎಸ್ ಜಿಲ್ಲಾಧ್ಯಕ್ಷರಿಂದ ಬೆಲ್ಟ್, ಟೈ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ 100 ವರ್ಷ ಪೂರೈಸಿದ ಸರಕಾರಿ ಹಿರಿಯ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆ ನಂ. 2ರಲ್ಲಿ ಗದಗ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಎಂ.ವೈ. ಮುಧೋಳ ಶಾಲೆಯ ಎಲ್ಲಾ ಮಕ್ಕಳಿಗೆ ಅನುಕೂಲವಾಗುವಂತೆ ಬೆಲ್ಟ್ ಹಾಗೂ ಟೈಗಳನ್ನು ಶಾಲೆಯ ಮುಖ್ಯೋಪಾಧ್ಯಾಯರಾದ ದಲಬಂಜನ ಅವರ ನೇತೃತ್ವದಲ್ಲಿ ವಿತರಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸರಕಾರಿ ಕನ್ನಡ ಶಾಲೆಗಳಲ್ಲಿ ಹೆಚ್ಚಿನ ಬಡತನ ಹೊಂದಿರುವ ಮಕ್ಕಳು ಇರುವುದರಿಂದ ಅವರಿಗೆ ಅನುಕೂಲವಾಗಲೆಂದು ಒಂದು ಸಣ್ಣ ಅಳಿಲು ಸೇವೆ ರೂಪದಲ್ಲಿ ಈ ಸೇವೆ ಸಲ್ಲಿಸಿದ್ದೇನೆ. ನೀಡಿದ್ದೇನೆ. ಮುಂದೆ ವಾರ್ಷಿಕ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಪಡೆದ ಮಕ್ಕಳಿಗೆ ಬಹುಮಾನ ವಿತರಸುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖಂಡರಾದ ಈರಣ್ಣ ಬಾಳಿಕಾಯಿ, ಹಾಜಿಅಲಿ ಎಚ್.ಕೊಪ್ಪಳ, ತಿಪ್ಪಣ್ಣ ಹುಡ್ಡೆದ, ಬಾದಷಹ ಭಗವಾನ, ರವಿ ಮೋಹಿತೆ, ಶಾಲೆಯ ಎಲ್ಲಾ ಗುರುಗಳು, ಗುರುಮಾತೆಯರು ಹಾಗೂ ಶಾಲೆಯ ಎಲ್ಲಾ ಮಕ್ಕಳು ಉಪಸ್ಥಿತರಿದ್ದರು.

# ಮಟ್ಟಿಬಾವಿ ಅಭಿವೃದ್ಧಿಪಡಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಟ್ಟಣದ ವಾರ್ಡ್ ನಂ.6ರಲ್ಲಿಯ ಮಟ್ಟಿಬಾವಿಯನ್ನು ಅಭಿವೃದ್ಧಿ ಪಡಿಸಬೇಕೆಂದು ಶನಿವಾರ ಕರ್ನಾಟಕ ಪ್ರಜಾಪರ ವೇದಿಕೆ ವತಿಯಿಂದ ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವೇದಿಕೆಯ ತಾಲೂಕಾಧ್ಯಕ್ಷ ಹಸನ ತಹಸೀಲ್ದಾರ, ಪಟ್ಟಣದ ಮಟ್ಟಿಬಾವಿಗೆ ಯಾವುದೇ ರೀತಿಯ ತಡೆಗೋಡೆ ಇಲ್ಲದ ಪರಿಣಾಮ ಮಕ್ಕಳು, ವೃದ್ಧರು ಜೀವಭಯದಿಂದ ಸಂಚರಿಸುವಂತಾಗಿದೆ. ಬಾವಿಯನ್ನು ಸ್ವಚ್ಛಗೊಳಿಸದೇ ಇರುವ ಪರಿಣಾಮ ಗಬ್ಬೆದ್ದು ನಾರುತ್ತಿದೆ. ಈ ಬಗ್ಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ನಿರ್ಲಕ್ಷ್ಯ ಮಾಡಿದ್ದರ ಪರಿಣಾಮ ಇಂದು ಈ ಬಾವಿಯು ಗಿಡಗಂಟಿಗಳಿಂದ ಆವೃತವಾಗಿ ಜೀವಕ್ಕೆ ಸಂಚಕಾರ ತರುವಂತಾಗಿದೆ. ಆದ್ದರಿಂದ ಈ ಬಾವಿಯನ್ನು ಸ್ವಚ್ಛಗೊಳಿಸಿ ಸಾರ್ವಜನಿಕರ ಸದ್ಬಳಕೆ ಮಾಡಿಕೊಳ್ಳಲು ಅನುಕೂಲ ಕಲ್ಪಿಸಬೇಕೆಂದು ಮನವಿ ಸಲ್ಲಿಸಿದರು.

ಶಿವಾನಂದ ಸುಲ್ತಾನಪೂರ, ಶರೀಫ ಗುಡಿಮನಿ, ಅಜ್ಜಪ್ಪ ಬಿಢವೆ, ಸಾಧಿಕ ಮುಳಗುಂದ ಉಪಸ್ಥಿತರಿದ್ದರು.

# ಮಟ್ಟಿಬಾವಿ ಅಭಿವೃದ್ಧಿಪಡಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಟ್ಟಣದ ವಾರ್ಡ್ ನಂ.6ರಲ್ಲಿಯ ಮಟ್ಟಿಬಾವಿಯನ್ನು ಅಭಿವೃದ್ಧಿಪಡಿಸಬೇಕೆಂದು ಶನಿವಾರ ಕರ್ನಾಟಕ ಪ್ರಜಾಪರ ವೇದಿಕೆ ವತಿಯಿಂದ ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವೇದಿಕೆಯ ತಾಲೂಕಾಧ್ಯಕ್ಷ ಹಸನ ತಹಸೀಲ್ದಾರ, ಪಟ್ಟಣದ ಮಟ್ಟಿಬಾವಿಗೆ ಯಾವುದೇ ರೀತಿಯ ತಡೆಗೋಡೆ ಇಲ್ಲದ ಪರಿಣಾಮ ಮಕ್ಕಳು, ವೃದ್ಧರು ಜೀವಭಯದಿಂದ ಸಂಚರಿಸುವಂತಾಗಿದೆ. ಬಾವಿಯನ್ನು ಸ್ವಚ್ಛಗೊಳಿಸದೇ ಇರುವ ಪರಿಣಾಮ ಗಬ್ಬೆದ್ದು ನಾರುತ್ತಿದೆ. ಈ ಬಗ್ಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ನಿರ್ಲಕ್ಷ್ಯ ಮಾಡಿದ್ದರ ಪರಿಣಾಮ ಇಂದು ಈ ಬಾವಿಯು ಗಿಡಗಂಟಿಗಳಿಂದ ಆವೃತವಾಗಿ ಜೀವಕ್ಕೆ ಸಂಚಕಾರ ತರುವಂತಾಗಿದೆ. ಆದ್ದರಿಂದ ಈ ಬಾವಿಯನ್ನು ಸ್ವಚ್ಛಗೊಳಿಸಿ ಸಾರ್ವಜನಿಕರ ಸದ್ಬಳಕೆ ಮಾಡಿಕೊಳ್ಳಲು ಅನುಕೂಲ ಕಲ್ಪಿಸಬೇಕೆಂದು ಮನವಿ ಸಲ್ಲಿಸಿದರು.

ಶಿವಾನಂದ ಸುಲ್ತಾನಪೂರ, ಶರೀಫ ಗುಡಿಮನಿ, ಅಜ್ಜಪ್ಪ ಬಿಢವೆ, ಸಾಧಿಕ ಮುಳಗುಂದ ಉಪಸ್ಥಿತರಿದ್ದರು.

# ಧರ್ಮದ ಕಾರ್ಯಗಳಿಗೆ ಧರ್ಮಸ್ಥಳ ಎಂದಿಗೂ ಮುಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್

ಎಲ್ಲಿಯೇ ಧರ್ಮದ ಕಾರ್ಯಗಳು ನಡೆದರೂ ಅದಕ್ಕೆ ಪ್ರೋತ್ಸಾಹ ನೀಡಲು ಧರ್ಮಸ್ಥಳವು ಎಂದಿಗೂ ಮುಂದಿರುತ್ತದೆ. ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆಯವರು ಇಂತಹ ಕಾರ್ಯಗಳನ್ನು ಸದಾ ಪ್ರೋತ್ಸಾಹಿಸುತ್ತ ಬಂದಿದ್ದಾರೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ತಾಲೂಕಾ ಯೋಜನಾಧಿಕಾರಿ ಮಹಾಬಲೇಶ್ವರ ಪಟಗಾರ ಹೇಳಿದರು.



ಪಟ್ಟಣದಲ್ಲಿ ಈಚೆಗೆ ನೂತನವಾಗಿ ನಿರ್ಮಾಣಗೊಂಡ ಶ್ರೀ ನಗರೇಶ್ವರ ದೇವಸ್ಥಾನಕ್ಕೆ 1.5 ಲಕ್ಷ ರೂ.ಗಳ ದೇಣಿಗೆಯನ್ನು ಸಮರ್ಪಿಸಿ ಅವರು ಮಾತನಾಡಿದರು.

ನಿಮ್ಮ ಕಾರ್ಯಗಳಿಗೆ ಧರ್ಮಾಧಿಕಾರಿ ಡಾ. ಹೆಗ್ಗಡೆಯವರ ಆಶೀರ್ವಾದ ಯಾವಗಲೂ ಇದೆ ಎಂದು ತಿಳಿಸಿದರಲ್ಲದೆ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿಯಡಿ ಕೈಗೊಂಡ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ದೇವಸ್ಥಾನದ ಅಧ್ಯಕ್ಷ ರಾಮಚಂದ್ರಪ್ಪ ನವಲಿ ಮಾತನಾಡಿ, ನಮ್ಮ ಸಮಾಜದ ಬಗ್ಗೆ ಅಭಿಮಾನ ವ್ಯಕ್ತಪಡಿಸಿ, ಆಶೀರ್ವಾದ ಮಾಡಿರುವ ಡಾ. ವೀರೇಂದ್ರ ಹೆಗ್ಗಡೆಯವರ ಕಾರ್ಯವನ್ನು ನಮ್ಮ ಸಮಾಜವೆಂದಿಗೂ ಮರೆಯದು. ಅವರ ಆಶಯದಂತೆ ಈ ಹಣವನ್ನು ದೇವಸ್ಥಾದ ಅಭಿವೃದ್ಧಿಗಾಗಿ ಬಳಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಕಾರ್ಯದರ್ಶಿ ಚಂದ್ರಹಾಸ ಇಲ್ಲೂರ, ಸದಸ್ಯರಾದ ಸುರೇಶ ನವಲಿ, ರಾಮಚಂದ್ರ ಬೆಟದೂರ, ಸಂಜೀವ ಬಿಜಾಪೂರ, ನಾಗೇಶ ಗುಡಿಸಾಗರ, ಕೃಷಿ ಅಧಿಕಾರಿ ಶಂಭುಲಿಂಗ, ವಲಯ ಸೇವಾ ಪ್ರತಿನಿಧಿ ಸುಮಲತಾ, ಪುಷ್ಪಲತಾ, ವಿಜಯಲಕ್ಷ್ಮಿ, ಅಶ್ವಿನಿ ಇತರರಿದ್ದರು.

### ಡೆಂಘೀ ಮುಂಜಾಗೃತಾ ಜಾಗೃತಿ ಜಾಥಾದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಸೊಳ್ಳೆ ಕಡಿತದಿಂದ ತಪ್ಪಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಲಹೆ ಪ್ರಕಾರ ಬೇವಿನ ಎಣ್ಣೆಯೊಂದಿಗೆ ಕೊಬ್ಬರಿ ಎಣ್ಣೆ ಸೇರಿಸಿ, ಪ್ರತಿ ದಿನ ಕೈ-ಕಾಲು ಮತ್ತು ದೇಹಕ್ಕೆ ಹಚ್ಚುವದರಿಂದ ಡೆಂಘೀ ಸೊಳ್ಳೆ ಕಡಿತದಿಂದ ತಪ್ಪಿಸಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಅವರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರೋಟರಿ ಕ್ಲಬ್ ಆಫ್ ಸೆವೆನ್ ಹಿಲ್ಸ್ ಮತ್ತು ದೃಷ್ಟಿ ನರ್ಸಿಂಗ್ ಕಾಲೇಜುಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಡೆಂಘೀ ಮುಂಜಾಗೃತಾ ಜಾಗೃತಿ ಜಾಥಾ ಹಾಗೂ ರೋಟರಿ ಕ್ಲಬ್ ಆಫ್ ಸೆವೆನ್ ಹಿಲ್ಸ್ ವತಿಯಿಂದ ಸಾರ್ವಜನಿಕರಿಗೆ ಉಚಿತವಾಗಿ ನೀಡಿದ ನೀಮ್ ಆಯಿಲ್ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಬೇವಿನ ಎಣ್ಣೆ ಹಚ್ಚುವದರಿಂದ ವಿವಿಧ ರೀತಿಯ ಆರೋಗ್ಯ ಸಮಸ್ಯೆಗಳು ಕಡಿಮೆ ಆಗುತ್ತವೆ.



ರಾಜ್ಯ ಸರಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಡೆಂಘೀ ಸೊಳ್ಳೆ ಕಡಿತದಿಂದ ರಕ್ಷಿಸಿಕೊಳ್ಳಲು ಸಾರ್ವಜನಿಕರು ಬೇವಿನ ಎಣ್ಣೆ ಹಚ್ಚಿಕೊಳ್ಳಲು ಆರೋಗ್ಯ ಸಲಹೆ ನೀಡಿದೆ. ಧಾರವಾಡ ಜಿಲ್ಲೆಯಲ್ಲಿ ಡೆಂಘೀ ನಿಯಂತ್ರಣಕ್ಕೆ ಲಾರ್ವಾ ನಾಶ, ಸ್ವಚ್ಛತಾ ಅಭಿಯಾನ, ಜಾಗೃತಿ ಜಾಥಾ ಮತ್ತು ಕರಪತ್ರಗಳ ವಿತರಣೆ ಕಾರ್ಯಕ್ರಮಗಳನ್ನು ಪ್ರತಿ ಶುಕ್ರವಾರ ಆಯೋಜಿಸಲಾಗುತ್ತಿದೆ ಎಂದು ಹೇಳಿದರು.

ಆಟೋ ಚಾಲಕ ಇಸಾಕ್ ಮುಜಾವರ್, ಮೈಮುನಿ ನಿಸಾ ಬಡಬಡೆ, ಬೀಬಿ ಜಾನ್ ಹಾಗೂ ಮಾದರಸಾಬ್ ತಹಸೀಲ್ದಾರ ಸೇರಿದಂತೆ ಮಾಳಾಪುರದ ವಿವಿಧ ಮನೆಗಳಿಗೆ ಜಿಲ್ಲಾಧಿಕಾರಿಗಳು ಆರೋಗ್ಯ ಇಲಾಖೆ ಅಧಿಕಾರಿಗಳೊಂದಿಗೆ ತೆರಳಿ ಬೇವಿನ ಎಣ್ಣೆ, ಕರಪತ್ರ ವಿತರಿಸಿ ಡೆಂಗ್ಯೂ ನಿರ್ಮೂಲನೆ ಬಗ್ಗೆ ವಿವರಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶಶಿ ಪಾಟೀಲ, ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಸುಜಾತಾ ಹಸವೀಮಠ, ತಾಲೂಕು ಆರೋಗ್ಯಾಧಿಕಾರಿ ಡಾ. ತನುಜಾ ಕೆ.ಎನ್, ಡಿಎಂಓ ಡಾ. ಮಂಜುನಾಥ, ಕಿಟಶಾಸ್ತ್ರಜ್ಞ ಮಂಜುನಾಥ, ರೋಟರಿ ಕ್ಲಬ್ ಆಫ್ ಸೆವೆನ್ ಹಿಲ್ಸ್‌ನ ಅಧ್ಯಕ್ಷೆ ಗೌರಿ ಮಾಧನಬಾವಿ, ಕಾರ್ಯದರ್ಶಿ ಸ್ಮಿತಾ ಮಂತ್ರಿ, ಪಾಲಿಕೆ ಸದಸ್ಯ ರಾಜಶೇಖರ ಕಮತಿ, ಬಿಎಚ್‌ಇಓ ರೇಖಾ ಬ್ಯಾಡಗಿ, ರೋಟರಿ ಕ್ಲಬ್ ಆಫ್ ಸೇವನ್ ಹಿಲ್ಸ್ ಸದಸ್ಯರು ಸೇರಿದಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಸಾರ್ವಜನಿಕರು ಹಾಗೂ ದೃಷ್ಟಿ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸಾರ್ವಜನಿಕರು ಡೆ-ಂಘೀ ನಿಯಂತ್ರಣ ಬಗ್ಗೆ ಜಾಗೃತಿ ವಹಿಸಬೇಕು. ಮನೆಯಲ್ಲಿ ನೀರು ಸಂಗ್ರಹ ಮಾಡುವ ಕೃತಕ ಬಾವಿ, ಸಿಂಟೆಕ್ಸ್ ಹಾಗೂ ನೀರು ತುಂಬಿಸುವ ತೊಟ್ಟಿಗಳಲ್ಲಿ ಗಪ್ಪಿ ಮೀನುಗಳನ್ನು ಬಿಡುವ ಮೂಲಕ ಡೆಂಘೀ ಜ್ವರದ ಬಗ್ಗೆ ಜಾಗೃತಿ ವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

## ಅಪರ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಯನ್ನು ಕರ್ನಾಟಕ ಕಾನೂನು ಅಧಿಕಾರಿಗಳ ನಿಯಮಗಳನ್ವಯ ಅಭ್ಯರ್ಥಿಯಿಂದ ತುಂಬಲು 07 ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಜುಲೈ 31 ರೊಳಗೆ ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಕಚೇರಿ ವೇಳೆಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಇಂದು ಕಾಯಕ ರತ್ನ ಗೌರವ ಪ್ರಶಸ್ತಿ ಸ್ವೀಕಾರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನ ದೊಡ್ಡೂರ ಗ್ರಾಮದ ಗುಡ್ಡಪ್ಪ ಫ ಹಡಪದ ಅವರು ಗದಗ ಜಿಲ್ಲಾ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದಿಂದ ಕಾಯಕ ರತ್ನ ಗೌರವ ಪುರಸ್ಕಾರಕ್ಕೆ ಭಾಜನರಾಗಿದ್ದಾರೆ. ಜು.21 ರಂದು ಗದಗನಲ್ಲಿ ಜಿಲ್ಲಾಡಳಿತದ ಸಹಯೋಗದಲ್ಲಿ ನಡೆಯುವ ಹಡಪದ ಅಪ್ಪಣ್ಣ ಜಯಂತ್ಯುತ್ಸವದಲ್ಲಿ ಪ್ರಶಸ್ತಿ ಸ್ವೀಕರಿಸಲಿದ್ದಾರೆ.

## ಚರಂಡಿಗಳ ಸ್ವಚ್ಛತೆಗೆ ಕ್ರಮ ಕೈಗೊಳ್ಳಿ



■ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ರಾಮದ ಪ್ರಮುಖ ಬೀದಿಗಳೂ ಸೇರಿದಂತೆ ಬಡಾವಣೆಗಳಲ್ಲಿ ಇರುವ ಚರಂಡಿಗಳನ್ನು ಸ್ವಚ್ಛಗೊಳಿಸದಿರುವುದು ಸೊಳ್ಳೆ, ಕ್ರಿಮಿಕೀಟಗಳ ಹಾವಳಿಗೆ ಕಾರಣವಾಗಿದೆ. ಅಶುದ್ಧ ಕುಡಿಯುವ ನೀರು ಪೂರೈಕೆಯಾಗುತ್ತಿದ್ದು, ಡೆಂಘೀ ಜ್ವರ, ಮಲೇರಿಯಾ ಸೇರಿದಂತೆ ವಿವಿಧ ರೋಗಗಳ ಭೀತಿ ಕಾಡುತ್ತಿದೆ. ಸಂಬಂಧಿಸಿದವರು ಕೂಡಲೇ ಸ್ವಚ್ಛತೆಗೆ ಕ್ರಮ ಕೈಗೊಳ್ಳಬೇಕು ಎಂದು ಡಂಬಳ ಗ್ರಾಮದ ಯುವಕರು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಶಶಿದರ ಹೊಂಬಳ ಅವರಿಗೆ ಮನವಿ ಸಲ್ಲಿಸಿದರು.

ಗ್ರಾಮದಲ್ಲಿ ಕಳ್ಳತನ ಪ್ರಕರಣಗಳು ಹೆಚ್ಚುತ್ತಿರುವ ಕಾರಣ ಗ್ರಾಮಸ್ಥರು ಆತಂಕದಲ್ಲಿದ್ದಾರೆ. ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಸಿ.ಸಿ ಕ್ಯಾಮೆರಾಗಳನ್ನು ಅಳವಡಿಸುವ ಮೂಲಕ ಕಳ್ಳತನ ತಡೆಯಲು ಮುಂದಾಗಬೇಕು ಎಂದು ಗ್ರಾಮದ ಯುವಕರಾದ ಶಿವಾನಂದ ಬಂಡಿ, ಪ್ರಕಾಶ ಕೋತಂಬ್ರಿ, ಈರಣ್ಣ ಹಿರೇಮಠ, ಕುಮಾರ ಹಿರೇಮಠ, ವೀರಯ್ಯ, ವಿನಾಯಕ ಕಟ್ಟೆಣ್ಣೆನವರ ಮನವಿ ಮಾಡಿದರು.


ಮನವಿ ಸ್ವೀಕರಿಸಿ ಪಿಡಿಓ ಶಶಿದರ ಹೊಂಬಳ ಮಾತನಾಡಿ, ರೋಗ ಹರಡುವ ಸೊಳ್ಳೆಗಳ ನಿಯಂತ್ರಣಕ್ಕೆ ಮಿಲಾಥಿನ್ ಪೌಡರ್ ಸಿಂಪಡಿಸಲಾಗಿದ್ದು, ಗ್ರಾಮದಲ್ಲಿ ಯಾವುದೇ ಡೆಂಘೀ ಪ್ರಕರಣ ಕಂಡುಬಂದಿಲ್ಲ. ಕಳ್ಳತನ ತಡೆಗೆ ಸಿ.ಸಿ ಕ್ಯಾಮರಾಗಳನ್ನು ಅಳವಡಿಸಲು ಗ್ರಾಮ ಪಂಚಾಯತ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರ ಸಭೆಯಲ್ಲಿ ಪ್ರಸ್ತಾಪಿಸಿ ಕ್ರಮಕ್ಕೆ ಮುಂದಾಗುತ್ತೇವೆ ಎಂದು ಭರವಸೆ ನೀಡಿದರು.

### ಬಿಜೆಪಿ ಯುವ ಮೋರ್ಚಾ ವತಿಯಿಂದ

## ಕಾರ್ಗಿಲ್ ವಿಜಯೋತ್ಸವದ ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಬಿಜೆಪಿ ಗದಗ ಜಿಲ್ಲಾ ಯುವ ಮೋರ್ಚಾ ವತಿಯಿಂದ ಜುಲೈ 25, 26ರಂದು ನಡೆಯಲಿರುವ 25ನೇ ಕಾರ್ಗಿಲ್ ವಿಜಯ ದಿವಸದ ನಿಮಿತ್ತ ಪೂರ್ವಭಾವಿ ಸಭೆ ನಡೆಸಲಾಯಿತು.



ಈ ಸಂದರ್ಭದಲ್ಲಿ ಬಿಜೆಪಿ ಯುವ ಮೋರ್ಚಾ ರಾಜ್ಯ ಉಪಾಧ್ಯಕ್ಷ ಈರಣ್ಣ ಅಂಗಡಿ ಎಲ್ಲಾ ಯುವ ಮೋರ್ಚಾ ಕಾರ್ಯಕರ್ತರೊಂದಿಗೆ ವ್ಯವಸ್ಥೆಗಳನ್ನು ಸಿದ್ಧಪಡಿಸಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲು ತಿಳಿಸಿದರು.

ಯುವ ಮೋರ್ಚಾ ಜಿಲ್ಲಾ ಅಧ್ಯಕ್ಷ ಸಂತೋಷ ಅಕ್ಕಿ ಮಾತನಾಡಿ, ಗದಗ ಜಿಲ್ಲೆಯ ಯುವಕರು ಕಾರ್ಯಕ್ರಮದಲ್ಲಿ ಭಾಗವಹಿಸಿ 25ನೇ ಕಾರ್ಗಿಲ್ ವಿಜಯೋತ್ಸವದ ಜಾಗೃತಿ ಮೂಡಿಸುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಕಾಶ ಕೊತಂಬ್ರಿ, ಶಿವಾನಂದ ಬಂಡಿ, ನಾಗರಾಜ ನವಲಿ, ಶಿವು ಕುರಿ, ಅರುಣಮಠ, ನವೀನ ಕುರ್ತಕೋಟಿ, ಶಕ್ತಿ ಕತ್ತಿ, ಸುರೇಶ ಚವ್ಹಾಣ, ರಾಹುಲ ಸಂಕಣ್ಣವರ, ವಿರೂಪಾಕ್ಷಪ್ಪ ಹಸಬಿ, ದರ್ಮರಾಜ ಕೊಂಚಿಗೇರಿ, ವೀರಣ್ಣ ಅಂಗಡಿ, ವರುಣ ಬೆಲ್ಲದ, ಅವಿನಾಶ ಹೊನಗುಡಿ, ಕಾಳು ತೋಟದ, ಸುನೀಲ ಕುರ್ತಕೋಟಿ, ವಿರೇಶಪ್ರಭು ಗದುಗಿನ್, ಕಾರ್ತಿಕ ಮುತ್ತಿನಪೆಂಡಿಮಠ, ಕಿರಣ ಕಲಾಲ, ಅಪ್ಪು ನಮಸ್ತೆಮಠ, ಸಚಿನ್ ಮಡಿವಾಳರ ಸೇರಿದಂತೆ ಯುವ ಮೋರ್ಚಾದ ಎಲ್ಲಾ ಜಿಲ್ಲಾ ಪದಾಧಿಕಾರಿಗಳು ಮತ್ತು ಕಾರ್ಯಕಾರಿ ಸದಸ್ಯರು ಸಭೆಯಲ್ಲಿ ಭಾಗವಹಿಸಿದ್ದರು.

## ಆಧ್ಯಾತ್ಮ ವಿದ್ಯಾಶ್ರಮದಲ್ಲಿ ಗುರು ಪೂರ್ಣಿಮಾ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆಧ್ಯಾತ್ಮ ವಿದ್ಯಾಶ್ರಮದಲ್ಲಿ ಗುರುಪೂರ್ಣಿಮಾ ನಿಮಿತ್ತ ರವಿವಾರ ಬೆಳಿಗ್ಗೆ 6 ಗಂಟೆಗೆ ಶ್ರೀ ಗುರುಗಳ ಹಾಗೂ ಶ್ರೀಚಕ್ರಕ್ಕೆ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಕುಂಕುಮಾರ್ಚನೆ, ಲಲಿತಾ ಸಹಸ್ರನಾಮಾವಳಿ, ಪಾರಾಯಣ ಕಾರ್ಯಕ್ರಮ ನೆರವೇರುವುದು.

ಕಾರ್ಯಕ್ರಮವನ್ನು ಶ್ರೀ ಚನ್ನಬಸಯ್ಯ ಶಾಸ್ತ್ರೀ ಹೇಮಗಿರಿಮಠ ಇವರು ನಡೆಸಿಕೊಡುವರು. 10.30ಕ್ಕೆ ಗಂಟೆಗೆ ಸಭಾ ಕಾರ್ಯಕ್ರಮ ಪೂಜ್ಯಶ್ರೀ ಶಿವಶರಣೆ ಡಾ ನೀಲಮ್ಮ ತಾಯಿಯವರ ಅಧ್ಯಕ್ಷತೆಯಲ್ಲಿ ನೆರವೇರುವುದು.

ಪೂಜ್ಯಶ್ರೀ ಜಗದ್ಗುರು ಅಭಿನವ ಶಿವಾನಂದ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಮುಖ್ಯ ಅತಿಥಿಗಳಾಗಿ ನಿವೃತ್ತ ನ್ಯಾಯಾಧೀಶರಾದ ಅರಳಿ ನಾಗರಾಜ್, ಪಂಡಿತ್ ಹೂಲಿ ಆಚಾರ್ಯರು, ಡಾ. ಸತೀಶ್ ಹೊಂಬಾಳಿ, ಡಾ. ಅರುಂಧತಿ, ಕುಲಕರ್ಣಿ ಹಾಗೂ ವಿಶೇಷ ಉಪನ್ಯಾಸಕರಾಗಿ ಅನಿಲ್ ವೈದ್ಯ ಆಗಮಿಸುವರು. 11 ದಿನಗಳವರೆಗೆ ಉಪವಾಸ, ಮೌನ ಅನುಷ್ಠಾನ ಕೈಗೊಂಡ ಶರಣೆ ಮೈತ್ರಾ ದೇವಿಯವರ ಅನುಷ್ಠಾನ ಮಂಗಳ ಪೂಜ್ಯ ಗುರುಗಳ ಸಾಧ್ಯದಲ್ಲಿ ನೆರವೇರುವುದು. ಶ್ರೀ ಮಲ್ಲನಗೌಡ ಪರಡ್ಡಿ ಅವರಿಗೆ ಸನ್ಮಾನ ಹಾಗೂ ಆದಿಶಕ್ತಿ ಬಳಗದ ತಾಯಂದಿರಿಂದ ಸೌಂದರ್ಯ ಲಹರಿ ಪಾರಾಯಣ, ಪಲ್ಲಕ್ಕಿ ಸೇವೆ, ಅನ್ನದಾಸೋಹ ಜರುಗುವುದು.

ಶಾಂತಾ ವಿ.ಹಿರೇವಡೆಯರ್ ಹಾಗೂ ಲಕ್ಷ್ಮೀದೇವಿ ಎಸ್.ಮುಳುಗುಂದ್ ಇವರು ಅನ್ನದಾಸೋಹ ಸೇವೆ ವಹಿಸಿಕೊಂಡಿದ್ದು, ಕಾರ್ಯಕ್ರಮದಲ್ಲಿ ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾದ ಸುಧಾ ಹುಚ್ಚಣ್ಣವರ ಉಪಸ್ಥಿತರಿರುವರು. ಸರ್ವರೂ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಆದಿಶಕ್ತಿ ಬಳಗದ ಟ್ರಸ್ಟ್ ಕಮಿಟಿ ಸದಸ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒತ್ತುವರಿ ತೆರವುಗೊಳಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಬಸ್ ನಿಲ್ದಾಣದ ಎದುರುಗಡೆ ಸರಕಾರಿ ಜಾಗ ಅತಿಕ್ರಮಣ ನಿರ್ಮಾಣದ ಒತ್ತುವರಿ ತೆರವುಗೊಳಿಸಬೇಕೆಂದು ಆಗ್ರಹಿಸಿ ಶನಿವಾರ ಶಿರಹಟ್ಟಿ ಕರವೇ (ಪ್ರವೀಣಶೆಟ್ಟಿ ಬಳಗ)ದ ತಾಲೂಕಾ ಘಟಕದಿಂದ ಮುಖ್ಯಾಧಿಕಾರಿಗಳ ಮೂಲಕ ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ಅವರಿಗೆ ಮನವಿ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಕರವೇ ತಾಲೂಕಾಧ್ಯಕ್ಷ ಮಹಮ್ಮದರಫಿಕ ಕೆರಿಮನಿ, ಶಿರಹಟ್ಟಿ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಬಸ್ ನಿಲ್ದಾಣದ ಎದುರುಗಡೆಯ ಖಾಸಗಿ ವಾಣಿಜ್ಯ ಮಳಿಗೆಗಳು ಸರಕಾರಿ ನಿಯಮಗಳನ್ನು ಗಾಳಿಗೆ ತೂರಿ ನಿರ್ಮಿಸಿದ್ದಲ್ಲದೇ ಸರಕಾರಿ ಜಾಗವನ್ನು ಒತ್ತುವರಿ ಮಾಡಿ ನಿರ್ಮಾಣವಾಗಿವೆ. ಇದರಿಂದ ನಿತ್ಯ ಸಂಚಾರ ದಟ್ಟಣೆ ಹೊಂದಿರುವ ಬಸ್ ನಿಲ್ದಾಣದ ಮುಂದೆ ವಾಹನಗಳು ತಿರುವು ಪಡೆಯಲು ಮತ್ತು ಸಂಚಾರ ದಟ್ಟಣೆಯಲ್ಲಿ ವಾಹನಗಳ ಚಾಲನೆಗೆ ಅಡಚಣೆಯಾಗುತ್ತಿದೆ. ಈ ಹಿಂದೆ ಈ ಸ್ಥಳದಲ್ಲಿ ಹಲವಾರು ಬಾರಿ ಅಪಘಾತಗಳು ಸಂಭವಿಸಿವೆ. ಸುಗಮ ಸಂಚಾರಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಸರಕಾರಿ ಜಾಗ ಒತ್ತುವರಿಯನ್ನು ತೆರವುಗೊಳಿಸಬೇಕು ಎಂದರು.

ವೆಂಕಟೇಶ ಬೆಲೂರ, ಶ್ರೀನಿವಾಸ ಭಂಡಾರಿ, ಗೌಸುಸಾಬ ಕಲಾವಂತ, ಮನಸೂರ ಮಕಾನದಾರ, ಈರಣ್ಣ ಬಾಗೇವಾಡಿ, ಹಜರತ್‌ಅಲಿ ಬಾಬುಕಾನವರ, ಗೌಸ ಮಕಾನದಾರ, ಚಾಂದಸಾಬ ಕವಲೂರ, ಕಾಶೀಂ ಸವಣೂರ, ಶಕೀಲ ಪಠಾಣ, ಮಲ್ಲು ಸೂರಣಗಿ ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಯನ್ನು ಕರ್ನಾಟಕ ಕಾನೂನು ಅಧಿಕಾರಿಗಳ ನಿಯಮಗಳನ್ವಯ ಅಭ್ಯರ್ಥಿಯಿಂದ ತುಂಬಲು 10 ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಜುಲೈ 31 ರೊಳಗೆ ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಕಚೇರಿ ವೇಳೆಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

### ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಪುರಸ್ಕಾರ ಸಮಾರಂಭದಲ್ಲಿ ಡಾ.ಪ್ಯಾರಅಲಿ ನೂರಾನಿ

# ವಿದ್ಯಾರ್ಥಿಗಳಿಗೆ ಪ್ರತಿಭಾನ್ವಿತರು ಮಾದರಿಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪುರಸ್ಕರಿಸುವುದರ ಜೊತೆಗೆ ಇತರ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಿ ಅವರೂ ಶಿಕ್ಷಣದಲ್ಲಿ ಮೇಲುಗೈ ಸಾಧಿಸುವಂತೆ ಪಾಲಕರು, ಶಿಕ್ಷಕರು ಉತ್ತೇಜನ ನೀಡಬೇಕೆಂದರು ಗದಗ ಐಎಂಎ ಮಾಜಿ ಅಧ್ಯಕ್ಷ ಡಾ.ಪ್ಯಾರಅಲಿ ನೂರಾನಿ ಅಭಿಪ್ರಾಯಪಟ್ಟರು.

ಅವರು ಶನಿವಾರ ಗದಗ ತಾಲೂಕಿನ ಹೊಂಬಳ ಗ್ರಾಮದ ಸರಕಾರಿ ಪ್ರೌಢಶಾಲೆಯಲ್ಲಿ ಶಿಕ್ಷಣ ಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ಮೂರು ಸ್ಥಾನಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ವಿತರಣಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಕಲಿಕೆಯಲ್ಲಿ ಎಲ್ಲ ಮಕ್ಕಳನ್ನೂ ಮುಂಚೂಣಿಗೆ ತರಬೇಕು. ಪ್ರತಿಭಾವಂತರನ್ನು ಪುರಸ್ಕರಿಸುವ ಇತರ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಿ ಅವರೂ ಮುಂದೆ ಬರುವಂತೆ ಮಾಡಬೇಕು. ಈ ನಿಟ್ಟಿನಲ್ಲಿ ಪ್ರತಿಷ್ಠಾನವು ಇತರ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಲೆಂದೇ ಶಾಲೆಯ ಬಾಗಿಲವರೆಗೂ ಬಂದು ಸನ್ಮಾನಿಸಿ ನೀವೂ ಇವರಂತೆ ಆಗಿ ಎಂದು ತೋರಿಸುವ ಕಾರ್ಯ ಮಾಡುತ್ತಿದ್ದಾರೆ ನೀಜಕ್ಕೂ ಪ್ರತಿಷ್ಠಾನ ದಿಟ್ಟ ಹೆಜ್ಜೆಯನ್ನಿಟ್ಟಿದೆ ಎಂದರು.

ಅಧ್ಯಕ್ಷತೆಯನ್ನು ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ವಹಿಸಿದ್ದರು. ಉಪಾಧ್ಯಕ್ಷ ಶಂಕ್ರಪ್ಪ ಅಣ್ಣಿಗೇರಿ,



ಶಾಲೆಯ ಮುಖ್ಯೋಪಾಧ್ಯಾಯ ಎಂ.ವ್ಹಿ. ಪಾಟೀಲ, ಶರಣಪ್ಪ ದಿಡ್ಡಿಮನಿ, ಕೆ.ವ್ಹಿ. ಹಿರೇಮಠ, ಸಿ.ಬಿ. ಮುಧೋಳಮಠ ಉಪಸ್ಥಿತರಿದ್ದರು.

ಹೊಂಬಳ ಗ್ರಾಮದ ಸರಕಾರಿ ಪ್ರೌಢಶಾಲೆಯ ಮುಸ್ಕಾನ್ ಅಬ್ಬಿಗೇರಿ, ಜ್ಯೋತಿ ಸರ್ವದೆ, ರೇಖಾ ನರೇಗಲ್, ಸಹನಾಬೇಗಂ ದಂಡಿನ, ಮಹಾಲಕ್ಷ್ಮೀ ಪಾಟೀಲ ಅವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಶಾಲೆಯ ಶಿಕ್ಷಕ ಶಿಕ್ಷಕಿಯರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಲಿಂಗದಾಳ: ತಾಲೂಕಿನ ಲಿಂಗದಾಳ ಗ್ರಾಮದ ಸರಕಾರಿ ಪ್ರೌಢಶಾಲೆಯಲ್ಲಿ ಎಸ್.ಡಿ.ಎಂ.ಸಿ ಅಧ್ಯಕ್ಷ ಉಮೇಶ ಗುಳೇದ, ಗ್ರಾಮದ ಗಣ್ಯರಾದ ಗುರುಸಿದ್ಧಪ್ಪ ಅಂಗಡಿ, ಶಾಲಾ ಮುಖ್ಯೋಪಾಧ್ಯಾಯೆ ಪಾರಮ್ಮ ಸಜ್ಜನ ಅವರ ಉಪಸ್ಥಿತಿಯಲ್ಲಿ ಪ್ರತಿಷ್ಠಾನದ ಪದಾಧಿಕಾರಿಗಳು, ಸೌಜನ್ಯ ಸಿದ್ಧಣ್ಣವರ, ಕೀರ್ತಿ ಲಿಂಗನಗೌಡ್ರ, ದೇವರಾಜ ಗೋನಾಳ, ಸುಕನ್ಯಾ ತೊರಗಲ್ಲ, ಸ್ಪಂದನಾ ನವಲಗುಂದ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಿದರು. ಆರ್.ಎಂ. ಬಿಂಗಿ ಸ್ವಾಗತಿಸಿದರು, ಎಸ್.ಬಿ. ಭಜಂತ್ರಿ ನಿರೂಪಿಸಿ ವಂದಿಸಿದರು.

ಕದಡಿ : ಗದಗ ತಾಲೂಕಿನ ಕದಡಿ ಗ್ರಾಮದ ಸರಕಾರಿ ಪ್ರೌಢಶಾಲೆಯಲ್ಲಿ ಶಾಲಾ ಮುಖ್ಯೋಪಾಧ್ಯಾಯೆ ಸುಧಾ ಬನಿಕಲ್, ಗಣ್ಯರಾದ ಮಂಜುನಾಥ ಸಾಲಿ, ಬಾಳಪ್ಪ ಹುನಗುಂಡಿ ಹಾಗೂ ಪ್ರತಿಷ್ಠಾನದ ಪದಾಧಿಕಾರಿಗಳ ಉಪಸ್ಥಿತಿಯಲ್ಲಿ ಬಸಮ್ಮ ಹಿರೇಗೌಡ್ರ, ತಸ್ಲೀಮಾ ರಾಜೇಖಾನ್, ಅಕ್ಷತಾ ಕಬ್ಬಲಗೇರಿ, ಸೀಮಾ ಸವಡಿ, ಅಕ್ಕಮ್ಮ ವೀರಕ್ತಮಠ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಎಸ್.ವ್ಹಿ. ಗಂಗಪ್ಪನವರ ನಿರೂಪಿಸಿದರು. ಡಿ.ಪಿ. ರಂಗವಾಲೆ ವಂದಿಸಿದರು. ಮಂಜುಳಾ, ನೇಹಾ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಪಾಲ್ಗೊಂಡಿದರು.

ಜು. 23ರಂದು ಸಂಜೆ 4 ಗಂಟೆಗೆ ಗದುಗಿನ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಲಿಂ. ಬಿ.ಜಿ. ಅಣ್ಣಿಗೇರಿ ಗುರುಗಳ 94ನೇ ಜಯಂತಿ ಹಾಗೂ 10ನೇ ವರ್ಷದ ಪ್ರತಿಭಾ ಪುರಸ್ಕಾರ ಸಮಾರಂಭ ಜರುಗಲಿದೆ. ಸಾನ್ನಿಧ್ಯವನ್ನು ಪ್ರತಿಷ್ಠಾನದ ಗೌರವಾಧ್ಯಕ್ಷರಾದ ಪೂಜ್ಯ ಜ.ಡಾ.ತೆ-ೂಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ವಹಿಸುವರು.

ಮುಖ್ಯ ಅತಿಥಿಗಳಾಗಿ ಡಿಡಿಪಿಐ ಎಂ.ಎ. ರಡ್ಡೇರ, ವೈದ್ಯರಾದ ಡಾ. ಸಿ.ಸೊಲೋಮನ್, ನಿವೃತ್ತ ಪ್ರಾಚಾರ್ಯ ಸಿದ್ದು ಯಾಪಲಪರವಿ ಆಗಮಿಸುವರು. ಬೆಟಗೇರಿ ಗಾಂಧಿ ನಗರದ, ಗದಗ ಸಿದ್ದಲಿಂಗ ನಗರದ, ರಾಜೀವ ಗಾಂಧಿ ನಗರದ, ಎಸ್.ಎಂ. ಕೃಷ್ಣಾ ನಗರದ ಸರಕಾರಿ ಪ್ರೌಢಶಾಲೆ ಹಾಗೂ ಗದುಗಿನ ಸರಕಾರಿ ಉರ್ದು ಪ್ರೌಢಶಾಲೆಯ ಪ್ರತಿಭಾನ್ವಿತರಿಗೆ ಪುರಸ್ಕಾರ ನೀಡಲಾಗುವದು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka